ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SP NEWS ಡಿಜಿಟಲ್ ನ್ಯೂಸ್ ಕಹಾನಿ

SURYA PRAGATHI Kannada daily

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue:152 ಸಂಚಿಕೆ: 152 | Date:03-07-2026 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಜನರ ಕಷ್ಟ ಆಲಿಸಲು ಹೊಸದಾಗಿ 'ಪ್ರಜಾಸೇವೆ' ಎಂಬ ಇಲಾಖೆಯನ್ನು ಆರಂಭ; ಕಲಬುರಗಿಯಲ್ಲಿ ಜವಳಿ, ದೇವನಹಳ್ಳಿಯಲ್ಲಿ ಏರೋ ಪಾರ್ಕ್ ಸ್ಥಾಪಗೆ ಸಚಿವ ಸಂಪುಟ ಅಸ್ತು

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು: ಸಾರ್ವಜನಿಕರ ಅಹವಾಲುಗಳನ್ನು ಒಂದೇ ಸೂರಿನಡಿ ತ್ವರಿತವಾಗಿ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಮಹತ್ತರ ಹೆಜ್ಜೆಯಿಟ್ಟ ರಾಜ್ಯ ಸರ್ಕಾರ, ಜನರ ಕಷ್ಟ ಆಲಿಸಲು ಹೊಸದಾಗಿ 'ಪ್ರಜಾಸೇವೆ' ಎಂಬ ಇಲಾಖೆಯನ್ನು ಆರಂಭಿಸಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ, ಪ್ರಜಾಸೇವೆ ಇಲಾಖೆ ಆರಂಭ, ಕಲಬುರಗಿಯಲ್ಲಿ ಜವಳಿ ಪಾರ್ಕ್ ಸ್ಥಾಪನೆ ಹಾಗೂ ದೇವನಹಳ್ಳಿಯಲ್ಲಿ ಏರೋ ಪಾರ್ಕ್ ಸ್ಥಾಪಗೆ ಒಪ್ಪಿಗೆ ನೀಡಲಾಗಿದೆ.

ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ ಶಿವಕುಮಾರ್, ಇನ್ಮುಂದೆ ಸಾರ್ವಜನಿಕರು ತಮ್ಮ ಸಮಸ್ಯೆಗಳು, ದೂರುಗಳು ಅಥವಾ ಪ್ರತಿಭಟನೆಯ ಅರ್ಜಿಗಳನ್ನು ಹಿಡಿದು ಅಲ್ಲಿ-ಇಲ್ಲಿ ಅಲೆಯುವ ಅಗತ್ಯವಿಲ್ಲ. ಜನರ ಕಷ್ಟ ಆಲಿಸಲು ಸರ್ಕಾರ ಹೊಸದಾಗಿ 'ಪ್ರಜಾಸೇವೆ' ಎಂಬ ವ್ಯವಸ್ಥೆಯನ್ನು ತಂದಿದ್ದು, ಒಬ್ಬ ಸಚಿವರಿಗೆ ಇದರ ಸಂಪೂರ್ಣ ಜವಾಬ್ದಾರಿ ವಹಿಸಲಾಗುತ್ತಿದೆ ಎಂದರು.

ಪ್ರತಿ ಜಿಲ್ಲಾ ಉಸ್ತುವಾರಿ ಸಚಿವರು ಎರಡು ವಿಧಾನಸಭಾ



ಕ್ಷೇತ್ರಗಳಲ್ಲಿ ತಿಂಗಳಿಗೆ ಕಡ್ಡಾಯವಾಗಿ ಎರಡು ದಿನ ಈ ಪ್ರಜಾಸೇವೆ ಅಭಿಯಾನ ನಡೆಸಬೇಕೆಂದು ಸಿಎಂ ಆದೇಶಿಸಿದ್ದಾರೆ. ಇನ್ನು ರಾಜ್ಯದಲ್ಲಿ ಈ ಬಾರಿ ಶೇ. 20 ಕ್ಕಿಂತ ಹೆಚ್ಚು ಮಳೆ ಕೊರತೆಯಾಗಲಿದ್ದು, ಭೀಕರ ಜಲಕ್ಷಾಮ ಎದುರಾಗುವ ಲಕ್ಷಣಗಳಿವೆ ಎಂದು ಡಿ.ಕೆ.ಶಿವಕುಮಾರ್ ಆತಂಕ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಜಿಲ್ಲೆಗಳಿಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸುವಂತೆ ಸಚಿವರಿಗೆ ಸೂಚಿಸಿರುವುದಾಗಿ ತಿಳಿಸಿದರು.

ಬೆಂಗಳೂರಿನಲ್ಲಿ ಒಸಿ ಮತ್ತು ಸಿಸಿ ವಿಚಾರದಲ್ಲಿ ಕೋರ್ಟ್ ವಿನಾಯಿತಿ ನೀಡಿದ ಬೆನ್ನಲ್ಲೇ, ಕಟ್ಟಡ ಕಟ್ಟಿದವರು ಅರ್ಜಿ ಸಲ್ಲಿಸಲು ಆಗಸ್ಟ್ 15ರವರೆಗೆ ಕಾಲಾವಕಾಶ ವಿಸ್ತರಿಸಲಾಗಿದೆ.

ಕಲಬುರಗಿಲ್ಲಿ ಜವಳಿ ಪಾರ್ಕ್ ಕೇಂದ್ರ ಮತ್ತು ರಾಜ್ಯ ಸರ್ಕಾರದ ಜಂಟಿ ಸಹಭಾಗಿತ್ವದಲ್ಲಿ ಕಲಬುರಗಿಯಲ್ಲಿ ಸುಮಾರು 1,700 ಕೋಟಿ ರೂ. ವೆಚ್ಚದಲ್ಲಿ ಬೃಹತ್ ಜವಳಿ ಪಾರ್ಕ್ ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ. ಇದರಿಂದ ಸಾವಿರಾರು ಉದ್ಯೋಗ ಸೃಷ್ಟಿಯಾಗಲಿದೆ ಎಂದರು.

ಇನ್ನು ಬೆಂಗಳೂರಿನ ಎನ್‌ಜಿಇಎಫ್ ಆವರಣದಲ್ಲಿ 26.23 ಕೋಟಿ ವೆಚ್ಚದಲ್ಲಿ ಟ್ರೀ ಪಾರ್ಕ್ ನಿರ್ಮಾಣಕ್ಕೆ ಅನುಷ್ಠಾನ ಅನುಮೋದನೆ ನೀಡಲಾಗಿದೆ. ದೇವನಹಳ್ಳಿಯಲ್ಲಿ ಏರೋ ಪಾರ್ಕ್ ನಿರ್ಮಾಣಕ್ಕೆ 30 ಕೋಟಿ ಮಂಜೂರು ಮಾಡಲಾಗಿದೆ ಎಂದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ವಸತಿ ಶಾಲೆ/ಕಾಲೇಜು(ಮೌಲಾನ ಆಜಾದ್ ಶಾಲೆ)ಗಳ ವಿದ್ಯಾರ್ಥಿಗಳ ಸಮವಸ್ತ್ರ, ಶೂ ಮತ್ತು ಕ್ರೀಡಾ ಸಾಮಗ್ರಿಗಳಿಗೆ 33.06 ಕೋಟಿ ಬಿಡುಗಡೆ ಮಾಡಲಾಗಿದೆ ಎಂದರು.

## ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿಗೆ ಸ್ವಪಕ್ಷ ನಾಯಕರೇ ಅಪಸ್ವರ

# ಸರ್ಕಾರದ ವಿರುದ್ಧವೇ ವಾಸಣ್ಣ ಸವಾಲು



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು ; ರಾಜ್ಯ ರಾಜಕಾರಣದಲ್ಲಿ ಭಾರಿ ಸಂಚಲನ ಮೂಡಿಸಿದ್ದ ವಿವಾದಿತ ಹೇಮಾವತಿ ಲಿಂಕಿಂಗ್ ಕೆನಾಲ್ ಕಾಮಗಾರಿ ವಿಚಾರ ಇದೀಗ ಮತ್ತೆ ಮುನ್ನಲೆಗೆ ಬಂದಿದ್ದು, ಸರ್ಕಾರದ ವಿರುದ್ಧ ಸ್ವಪಕ್ಷದ ಶಾಸಕರಿಂದಲೇ ತೀವ್ರ ವಿರೋಧ ವ್ಯಕ್ತವಾಗಿದೆ. ಸರ್ಕಾರದ ಕನಸಿನ ಯೋಜನೆ ಎನ್ನಲಾದ ಈ ಕಾಮಗಾರಿಗೆ ಪ್ರಭಾವಿ ನಾಯಕರೇ ಅಪಸ್ವರ ಎತ್ತಿದ್ದಾರೆ.

### ಸರ್ಕಾರಕ್ಕೆ ಗುಬ್ಬಿ ಶಾಸಕ ಎಸ್.ಆರ್. ಶ್ರೀನಿವಾಸ್ ಬಹಿರಂಗ ಸವಾಲು

ಈ ಯೋಜನೆಗೆ ಕಟುವಾಗಿ ವಿರೋಧ ವ್ಯಕ್ತಪಡಿಸಿರುವ ಗುಬ್ಬಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಎಸ್.ಆರ್. ಶ್ರೀನಿವಾಸ್ (ವಾಸಣ್ಣ), ಸರ್ಕಾರದ ವಿರುದ್ಧವೇ ತಮ್ಮ ನಿಲುವನ್ನು ಸಮರ್ಥಿಸಿಕೊಂಡಿದ್ದಾರೆ. "ಯಾವುದೇ ಕಾರಣಕ್ಕೂ ಹೇಮಾವತಿ ಲಿಂಕಿಂಗ್ ಕೆನಾಲ್ ಕಾಮಗಾರಿ ನಡೆಯಲು ಬಿಡುವುದಿಲ್ಲ" ಎಂದು ಅವರು ಆಕ್ರೋಶದಿಂದ ಹೇಳಿದ್ದಾರೆ.

"ನಾನು ಈ ಹಿಂದೆ ಜೆಡಿಎಸ್ ಪಕ್ಷವನ್ನು ತೊರೆದು ಕಾಂಗ್ರೆಸ್ ಸೇರಿದ್ದೇ ಇದೇ ಯೋಜನೆಗೆ ತಡೆಯೊಡ್ಡುವ ಉದ್ದೇಶಕ್ಕಾಗಿ. ನನ್ನ ಕ್ಷೇತ್ರದ ಹಿತ ಹಾಗೂ ರೈತರ ಹೋರಾಟವೇ ನನಗೆ ಮುಖ್ಯ. ಈಗಾಗಲೇ ಈ ವಿಚಾರವಾಗಿ ಸರ್ಕಾರದ ಉನ್ನತ ಮಟ್ಟದಲ್ಲಿ, ನಾಲ್ಕು ಗೋಡೆಗಳ ಮಧ್ಯೆ ನನ್ನ ತೀವ್ರ ವಿರೋಧವನ್ನು ಮಾಡುತ್ತೇನೆ. ಹಾಗಾಗಿ ಕಾಮಗಾರಿ ಆರಂಭವಾಗುವುದಿಲ್ಲ ಎಂಬ ವಿಶ್ವಾಸ ನನಗಿದೆ" ಎಂದು ಶ್ರೀನಿವಾಸ್ ಖಡಕ್ ಆಗಿ ಹೇಳಿದ್ದಾರೆ. ಕಾಮಗಾರಿ ಏನಾದರೂ ಮುಂದುವರಿದರೆ ಅವರು ಪಕ್ಷ ತೊರೆಯಲಿದ್ದಾರಾ ಎಂಬ ಚರ್ಚೆಯೂ ರಾಜಕೀಯ ವಲಯದಲ್ಲಿ ಆರಂಭವಾಗಿದೆ. ಶಾಸಕರ ಭಿನ್ನಮತ ಶಮನಗೊಳಿಸಲು ಸರ್ಕಾರ ನಡೆಸಿದ ಸಂಧಾನ ಸಫಲವಾಗಿಲ್ಲ ಎಂಬ ಸುಳಿವು ಇದರಿಂದ ಸಿಕ್ಕಿದೆ

### ಯೋಜನೆ ಜಾರಿಗೆ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಪಟ್ಟು:

ಆದರೆ ಮತ್ತೊಂದೆಡೆ, ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಬದ್ಧವಾಗಿದೆ ಎಂಬ ಸಂದೇಶವನ್ನು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ನೀಡಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಅವರು, "ಯೋಜನೆ ಜಾರಿಗೆ ಎಲ್ಲಾ ಪ್ರಯತ್ನಗಳನ್ನು ಮಾಡಲಾಗುವುದು. ಮಾಗಡಿ ಮತ್ತು ಕುಣಿಗಲ್ ಭಾಗದವರು ತಮಗೆ ನೀರು ತಲುಪುತ್ತಿಲ್ಲ ಎನ್ನುತ್ತಿದ್ದಾರೆ. ಅವರಿಗೆ ಎಷ್ಟು ನೀರು ಬೇಕೋ ಅಷ್ಟನ್ನು ನಾಲೆಯಲ್ಲೇ ಪಡೆದುಕೊಳ್ಳಲಿ. ಈ ಬಗ್ಗೆ ಸಚಿವ ಜಿ. ಪರಮೇಶ್ವರ್ ಅವರೊಂದಿಗೆ ಚರ್ಚಿಸಿ, ಬಳಿಕ ಮುಖ್ಯಮಂತ್ರಿಯವರ ಗಮನಕ್ಕೆ ತಂದು ಅಂತಿಮ ತೀರ್ಮಾನ ಕೈಗೊಳ್ಳುತ್ತೇವೆ. ಎಲ್ಲರೂ ಒಂದೇ ಜಿಲ್ಲೆಯವರಾಗಿದ್ದು (ತುಮಕೂರು/ರಾಮನಗರ ಭಾಗ), ಪರ-ವಿರೋಧದ ನಡುವೆಯೂ ಎಲ್ಲಾ ಪಕ್ಷದವರು ಕುಳಿತು ಮಾತನಾಡಿ ಸಮಸ್ಯೆ ಬಗೆಹರಿಸಿಕೊಳ್ಳುತ್ತೇವೆ" ಎಂದು ತಿಳಿಸಿದ್ದಾರೆ. ಒಟ್ಟಾರೆಯಾಗಿ, ಕೆನಾಲ್ ಲಿಂಕಿಂಗ್ ಯೋಜನೆಯು ಕಾಂಗ್ರೆಸ್ ಪಕ್ಷದ ಒ ನಾಯಕರ ನಡುವಿನ ಪ್ರತಿಷ್ಠೆಯ ಕದನವಾಗಿ ಮಾರ್ಪಟ್ಟಿದ್ದು, ಮುಂದಿನ ದಿನಗಳಲ್ಲಿ ಯಾವ ತಿರುವು ಪಡೆದುಕೊಳ್ಳಲಿದೆ ಎಂಬುದು ಭಾರೀ ಕುತೂಹಲ ಮೂಡಿಸಿದೆ.

# ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು 7 ಕಾರ್ಮಿಕರು ಸಾವು

## ಸುರಕ್ಷತಾ ಕ್ರಮಗಳನ್ನು ಗಾಳಿಗೆ ತೂರಿ ಬಂಡೆ ಸ್ಫೋಟ; ಅಪಘಡದ ಜೀವಹಾನಿಗೆ ಪ್ರಧಾನಿ ಮೋದಿ ಸಂತಾಪ

ರಾಮನಗರ: ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು ಬಿಹಾರ ಮೂಲದ 7 ಮಂದಿ ಕಾರ್ಮಿಕರು ಸಾವಿಗೀಡಾಗಿರುವ ಘಟನೆ ಬೆಂಗಳೂರು ದಕ್ಷಿಣ ತಾಲೂಕಿನ ಮಾದಾಪಟ್ಟಣ ಬಳಿ ಇಂದು ನಸುಕಿನ ಜಾವ ನಡೆದಿದೆ. ಬೆಂಗಳೂರು ದಕ್ಷಿಣ ತಾಲೂಕಿನ ತಾವರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಕಾವೇರಿ ಕ್ರಷರ್‌ನಲ್ಲಿ ನಡೆದಿದೆ.

ಬಂಡೆ ಕೆಳಗೆ ಹಲವು ಕಾರ್ಮಿಕರು ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ರಕ್ಷಣಾ ಸಿಬ್ಬಂದಿ ದೌಡಾಯಿಸಿದ್ದಾರೆ. ಮೇಲಿಂದ ಕುಸಿದ ಬಂಡೆ ಮೇಲಿಂದ ಬಂಡೆ ಬಿದ್ದು ಏಳು ಮಂದಿ ಕಾರ್ಮಿಕರು ಮೃತಪಟ್ಟು, ಬಂಡೆ ಕೆಳಗೆ ಇನ್ನು ಹಲವು ಕಾರ್ಮಿಕರು ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ತಾವರೆಕರೆ ಪೊಲೀಸ್ ಠಾಣಾ ವ್ಯಾಪ್ತಿಯ ಮಾದಪಟ್ಟಣ ಗ್ರಾಮದಲ್ಲಿ ಈ ಘಟನೆ ನಡೆದಿದೆ.

**ಕಾವೇರಿ ಕಂಪನಿಗೆ ಸೇರಿದ ಕ್ರಷರ್**

ಕಾವೇರಿ ಕಂಪನಿಗೆ ಸೇರಿದ ಕ್ರಷರ್ ನಲ್ಲಿ ದುರಂತ ಸಂಭವಿಸಿದ್ದು, ಇಂದು ಬೆಳಗ್ಗೆ 7.30ರ ಸುಮಾರಿಗೆ ಈ ಘಟನೆ ನಡೆದಿದೆ. ಎಂದಿನಂತೆ ಕೆಲಸ ಮಾಡುತ್ತಿದ್ದ ಕಾರ್ಮಿಕರ ಪಾಲಿಗೆ ಬಂಡೆ ಯಮನಾಗಿ ಬಂದಿದೆ. ಇಟಾಚಿಯಲ್ಲಿ ಕೆಲಸ ಮಾಡುವಾಗ ಕಾರ್ಮಿಕರ ಮೇಲೆಯೇ ಬಿದ್ದು ಭಾರೀ ದುರಂತ ಸಂಭವಿಸಿದೆ. ಸ್ಥಳಕ್ಕೆ ತಾವರೆಕೆರೆ ಪೊಲೀಸ್ ಭೇಟಿ ಪರಿಶೀಲನೆ ನಡೆಸಿದ್ದಾರೆ.

**ಮೋದಿ ಅವರು ಸಂತಾಪ**

ಕಲ್ಲು ಗಣಿಗಾರಿಕೆಯಲ್ಲಿ ಸಂಭವಿಸಿದ ಅಪಘಡದಲ್ಲಿ ಉಂಟಾದ ಜೀವಹಾನಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಂತಾಪ ಸೂಚಿಸಿದ್ದಾರೆ. ಟ್ವೀಟ್ ಮಾಡಿರುವ ಮೋದಿ, "ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ನನ್ನ ತೀವ್ರ ಸಂತಾಪಗಳು. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ" ಎಂದು ಬರೆದುಕೊಂಡಿದ್ದಾರೆ.



**ಮುಂಜಾನೆ ಜಿಲೆಟಿನ್ ಸ್ಫೋಟ!**

ಸ್ಥಳೀಯ ಮೂಲಗಳ ಪ್ರಕಾರ, ಹುಲವೇನಹಳ್ಳಿ ಗ್ರಾಮದ ವ್ಯಾಪ್ತಿಯಲ್ಲಿ ಯಾವುದೇ ಅಧಿಕೃತ ಪರವಾನಗಿ ಇಲ್ಲದೆ ಕದ್ದುಮುಚ್ಚಿ ಅಕ್ರಮ ಗಣಿಗಾರಿಕೆ ನಡೆಸಲಾಗುತ್ತಿತ್ತು. ಇಂದು ಬೆಳಗಿನ ಜಾವ ಕಾರ್ಮಿಕರು ಎಂದಿನಂತೆ ಕಲ್ಲು ಕ್ವಾರಿಯಲ್ಲಿ ಕೆಲಸ ಮಾಡುತ್ತಿದ್ದಾಗ, ದೊಡ್ಡ ಬಂಡೆಗಳನ್ನು ಪುಡಿ ಮಾಡಲು ಅತಿಯಾದ ತೀವ್ರತೆಯ ಸ್ಫೋಟಕಗಳನ್ನು ಬಳಸಲಾಗಿದೆ.

ಈ ವೇಳೆ ಸುರಕ್ಷತಾ ಕ್ರಮಗಳನ್ನು ಗಾಳಿಗೆ ತೂರಿ ಬಂಡೆ ಸ್ಫೋಟಿಸುವಾಗ ಇಡೀ ಪ್ರದೇಶವೇ ಬಹುದೊಡ್ಡ ಸೌಂಡ್ ಜೊತೆಗೆ ಸಿಡಿದಿದೆ. ಸ್ಫೋಟದ ತೀವ್ರತೆಗೆ ಬಂಡೆ ಕುಸಿದು ಸಿಲುಕಿ ಏಳು ಜನ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ ಎನ್ನಲಾಗುತ್ತಿದ್ದು, ಮೃತರ ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆ ಇದೆ.

# ಜು.3ರಂದು "ಯುವ ಸೌರಭ" ಕಾರ್ಯಕ್ರಮ

ತುಮಕೂರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಸಂಯುಕ್ತ ಆಶ್ರಯದಲ್ಲಿ ಜುಲೈ 3ರಂದು ಬೆಳಿಗ್ಗೆ 10.30 ಗಂಟೆಗೆ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ "ಯುವ ಸೌರಭ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಉದ್ಘಾಟಿಸಿ ಅಧ್ಯಕ್ಷತೆವಹಿಸಲಿದ್ದಾರೆ. ಜಿಲ್ಲಾ ಶಾಲಾ ಶಿಕ್ಷಣ(ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕ ರಾಧಾ ಎಂ.ಎಸ್. ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಉಪಸ್ಥಿತರಿರಲಿದ್ದಾರೆ.

# ಎತ್ತಿನಹೊಳೆ ಯೋಜನೆ 220 ಕಿಮೀ ಕಾಮಗಾರಿ ಮುಕ್ತಾಯ ನೂರು ದಿನಗಳಲ್ಲಿ ಕಾಮಗಾರಿ ಮುಗಿದರೆ ನೀರು ಬಿಡಬಹುದು

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು, ಎತ್ತಿನಹೊಳೆ ಯೋಜನೆ ಕುಡಿಯುವ ನೀರು ಪೂರೈಸುವ ಮಹತ್ವದ ಯೋಜನೆ ಆಗಿದೆ. ತುಮಕೂರು ಹಾಸನ, ಚಿಕ್ಕಬಳ್ಳಾಪುರ ಸೇರಿದಂತೆ ಒಟ್ಟು 7 ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಇದಾಗಿದೆ. ಸದ್ಯ ಈ ಯೋಜನೆಯ ಕಾಮಗಾರಿ ವೇಗ ಪಡೆದುಕೊಂಡಿದೆ. ಒಟ್ಟು 252 ಕಿಮೀನಲ್ಲಿ 220 ಕಿಮೀ ಸಂಪೂರ್ಣಗೊಂಡಿದೆ. ಅದರಲ್ಲಿ 23 ಕಿಮೀ ಪ್ರಗತಿಯಲ್ಲಿದ್ದು, 9 ಕಿಮೀ ಕಾಮಗಾರಿ ಬಾಕಿಯಿದೆ ಎಂದು ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಮಾಹಿತಿ ನೀಡಿದ್ದಾರೆ.

ಎತ್ತಿನಹೊಳೆ ಯೋಜನೆ ಕಾಮಗಾರಿ ವೀಕ್ಷಿಸಿದ ಸಚಿವ ರಾಮಲಿಂಗಾರೆಡ್ಡಿ ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಮಾರಶೆಟ್ಟಿಹಳ್ಳಿ ಮೀಸಲು ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದ ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಎತ್ತಿನಹೊಳೆ ಯೋಜನೆ ಕಾಮಗಾರಿ ವೀಕ್ಷಿಸಿದರು. ಅರಣ್ಯ ಪ್ರದೇಶದಲ್ಲಿ ಹಾದು ಹೋಗುವ ನಾಲೆ ಜಾಗ ಪರಿಶೀಲನೆ ಮಾಡಿ, ಯೋಜನೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಈ ವೇಳೆ ರಾಮಲಿಂಗಾರೆಡ್ಡಿಗೆ ಅರಣ್ಯ, ಕಂದಾಯ ಇಲಾಖೆ ಅಧಿಕಾರಿಗಳು ಸಾಥ್ ನೀಡಿದರು.



ಇನ್ನು ಎತ್ತಿನಹೊಳೆ ಯೋಜನೆ ಕಾಮಗಾರಿ ಪರಿಶೀಲನೆ ಬಳಿಕ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಎತ್ತಿನಹೊಳೆ ಕುಡಿಯುವ ನೀರು ಹಾಗೂ ಕೆರೆಗಳಿಗೆ ನೀರು ತುಂಬಿಸುವ ಯೋಜನೆ. 220 ಕಿಮೀ ಕಾಮಗಾರಿ ಮುಗಿದಿದೆ. ಇದರಲ್ಲಿ 6 ಕಿಮೀ ಅರಣ್ಯಕ್ಕೆ ಸೇರಿದ್ದು, ಸದ್ಯ ಗುಬ್ಬಿ ತಾಲೂಕಿನ ಮಾರಶೆಟ್ಟಿಹಳ್ಳಿಯಲ್ಲಿ 1.9 ಕಿಮೀ ಬಾಕಿ ಇತ್ತು. ನೂರು ದಿನಗಳಲ್ಲಿ 174 ಕಿಮೀವರೆಗೆ ಕೆಲಸ ಮುಗಿಸಿ ನೀರು ಬಿಡಬಹುದು ಎಂದು ಹೇಳಿದರು.

ಡಿಎ ವ9 ಆರ್ಡರ್ ಕೊಟ್ಟಿದ್ದು, ಕೆಲಸ ಆರಂಭಿಸುತ್ತಾರೆ. ಅರಸೀಕೆರೆ ಹತ್ತಿರ ಅರಣ್ಯ ಇದೆ ಅದಕ್ಕೂ ಕ್ಲಿಯರೆನ್ಸ್ ಕೊಟ್ಟಿದ್ದಾರೆ. ಅರಣ್ಯದ್ದು ಎಲ್ಲಾ ಕ್ಲಿಯರ್ ಆಗಿದೆ. ವ9 ಆರ್ಡರ್ ಕೊಟ್ಟಿದ್ದಾರೆ. ಇದು ಕ್ಲೋಸಿಂಗ್ ಕೆನಾಲ್ ಆಗಿದ್ದು, ಯಾವುದೇ ತೊಂದರೆ ಆಗುವುದಿಲ್ಲ. ಪ್ರಾಣಿಗಳಿಗೆ ತೊಂದರೆ ಆಗಬಾರದು ಅಂತಾ ಸೂಚನೆ ಮೇಲೆ ಅನುಮತಿ ಕೊಟ್ಟಿದ್ದಾರೆ. ಅದನ್ನ ತೆಗೆದು ಮತ್ತೆ ಕ್ಲೋಸ್ ಮಾಡಬೇಕು ಎಂದರು.

### 12 ರಾಜ್ಯದಲ್ಲಿ ಮಳೆ ಕಡಿಮೆ ಆಗಿದೆ ಎಂದ ರಾಮಲಿಂಗಾರೆಡ್ಡಿ

ರಾಜ್ಯದಲ್ಲಿ ಮಳೆ ಕೊರತೆ ವಿಚಾರವಾಗಿ ಮಾತನಾಡಿದ ಅವರು, ರಾಜ್ಯದಲ್ಲಿ ಮಳೆ ಕಡಿಮೆ ಆಗಿದೆ. ನಅಮ್ಮ ರಾಜ್ಯ ಮಾತ್ರವಲ್ಲ 12 ರಾಜ್ಯದಲ್ಲಿ ಮಳೆ ಕಡಿಮೆ ಆಗಿದೆ. ಮಧ್ಯ ಭಾರತದಲ್ಲಿ ಶೇ.50 ರಷ್ಟು ಮಳೆ ಕೊರತೆ ಇದೆ. ನಮ್ಮ ಡ್ಯಾಂಗಳಲ್ಲಿ ಕುಡಿಯುವ ನೀರಿಗೆ 3 ತಿಂಗಳಿಗೆ ಆಗುತ್ತೆ. ಮಳೆ ಬರದೆ ಇದ್ದರೆ ವ್ಯವಸಾಯಕ್ಕೆ ಕಷ್ಟ ಆಗುತ್ತೆ. ಕಳೆದ ಭಾರೀ ಎಲ್ಲಾ ಡ್ಯಾಂಗಳು ಇಷ್ಟೋತ್ತಿಗೆ ಭರ್ತಿ ಆಗಿದ್ದವು ಎಂದು ಹೇಳಿದರು.

### ಬೆಂಗಳೂರಿಗೆ ನೀರನ ಸಮಸ್ಯೆ ಎದುರಾಗುತ್ತಾ?

ಇನ್ನು ಬೆಂಗಳೂರಿಗೆ ನೀರನ ಸಮಸ್ಯೆ ಎದುರಾಗುತ್ತಾ ಎಂಬ ವಿಚಾರವಾಗಿ ಪ್ರತಿಕ್ರಿಯಿಸಿದ್ದು, ಇದು ನಮ್ಮ ರಾಜ್ಯದ ಸಮಸ್ಯೆಯಲ್ಲ, ಇದು ದೇಶದ ಅರ್ಧ ಭಾಗದ ಸಮಸ್ಯೆ. ಸದ್ಯ ನಮಗೆ ತೊಂದರೆ ಇಲ್ಲ. ಮೂರು ತಿಂಗಳಿಗೆ ಆಗುವಷ್ಟು ಕುಡಿಯುವ ನೀರಿಗೆ ಇದೆ. ಅಷ್ಟರಲ್ಲಿ ಮಳೆ ಬರುವ ನಿರೀಕ್ಷೆ ಇದೆ ಎಂದಿದ್ದಾರೆ.

ಸಿಎಂ ಜೊತೆ ಚರ್ಚಿಸಿ ತೀರ್ಮಾನ

ಹೇಮಾವತಿ ಎಕ್ಸ್ ಪ್ರೆಸ್ ಲಿಂಕ್ ಕೆನಾಲ್ ವಿವಾದ ವಿಚಾರವಾಗಿ ಮಾತನಾಡಿದ್ದು, ಪರಮೇಶ್ವರ್ ಜೊತೆ ಮಾತನಾಡಬೇಕು. ಎಲ್ಲಾ ಒಂದೇ ಜಿಲ್ಲೆಯ ಸಮಸ್ಯೆ ಇರುವುದು. ಮಾಗಡಿ, ಕುಣಿಗಲ್, ಥೇಲೆಂಡ್ ಎರಡಕ್ಕೂ ನೀರು ಬರುವುದಲ್ಲ. ಅವರಿಗೆ ಎಷ್ಟು ಬೇಕು ಅಷ್ಟು ನೀರು ನಾಲೆಯಲ್ಲೇ ತಗೋಳಿ ಅಂತಾ ಇವರು. ಪರಮೇಶ್ವರ್ ಮತ್ತು ನಾವು ಮಾತನಾಡಿ ಸಿಎಂ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ. ಪರ ವಿರೋಧ ಇದೆ, ಎಲ್ಲಾ ಪಾರ್ಟಿ ಅವರು ಕೂತು ಮಾತನಾಡುತ್ತೇವೆ ಎಂದು ತಿಳಿಸಿದರು.

ಇನ್ನು ಕೊರಟಗೆರೆ ವಡೇರಹಳ್ಳಿ ಬಳಿ ಎತ್ತಿನ ಹೊಳೆ ಬಫರ್ ಡ್ಯಾಮ್ ನಿರ್ಮಾಣ ವಿಚಾರವಾಗಿ ಮಾತನಾಡಿದ ಅವರು, ವಿರೋಧ ಇದೆ ನೀರು ಸ್ಟೋರೇಜ್ ಮಾಡಲೇ ಬೇಕಲ್ಲ. ಎರಡು ಮೂರು ಜಾಗ ಗುರುತಿಸಿದ್ದಾರೆ. ನೀರು ಸ್ಟೋರೇಜ್ ಮಾಡದೇ ಇದ್ದರೆ ಬೇಸಿಗೆಯಲ್ಲಿ ಕಷ್ಟ. 4 ಟಿಎಂಸಿ ನೀರಿದ್ದರೆ ಜನರಿಗೆ ಅನುಕೂಲ ಆಗುತ್ತೆ. ಅದನ್ನ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

# ಮಧುಗಿರಿ ಜಿಲ್ಲಾ ಬಿಜೆಪಿ ಮೋರ್ಚಾ ಪದಾಧಿಕಾರಿಗಳ ಪಟ್ಟಿತಡೆ ಮುಖಂಡರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳ ಪಟ್ಟಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರು ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ.

ಕೊರಟಗೆರೆ ಬಿಜೆಪಿ ಮುಖಂಡ ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಬಿಜೆಪಿ ಕೋರ್ ಕಮಿಟಿ ಸದಸ್ಯ ಬಿ.ಹೆಚ್. ಅನಿಲ್ ಕುಮಾರ್ ನೇತೃತ್ವದಲ್ಲಿ ಜಿಲ್ಲಾ ಹಾಗೂ ತಾಲ್ಲೂ ಕುಬಿಜೆಪಿ ಪದಾಧಿಕಾರಿಗಳು ಹಾಗೂ ವಿವಿಧ ಮೋರ್ಚಾ ಪದಾಧಿಕಾರಿಗಳು ಬುಧವಾರ ರಾಜ್ಯಾಧ್ಯಕ್ಷ ವಿಜಯೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರನ್ನು ಭೇಟಿ ಮಾಡಿ, ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಪದಾಧಿಕಾರಿಗಳ ಪಟ್ಟಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.



ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಯವರು, ಮಧುಗಿರಿ ಜಿಲ್ಲಾ ನೂತನ ಪದಾಧಿಕಾರಿಗಳ ಪಟ್ಟಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಸೂಚಿಸಿದರು. ಜಿಲ್ಲಾ ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಚರ್ಚಿಸಿ, ಪಕ್ಷದಕಾರ್ಯಕರ್ತರು ಮತ್ತು ಸಂಘಟನೆಯ ನಡುವೆ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು. ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಜುಲೈ 10ರಂದು ಸಭೆ ನಡೆಸಿ, ಎಲ್ಲರ ಅಭಿಪ್ರಾಯ ಪಡೆದು ಮುಂದಿನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳನ್ನು ಆಯ್ಕೆ ಮಾಡುವಂತೆ ನಿರ್ದೇಶನ ನೀಡಿದರುಎಂದು ಮಧುಗಿರಿ ಜಿಲ್ಲಾ ಕೋರ್‌ಕಮಿಟಿ ಸದಸ್ಯ ಬಿ.ಹೆಚ್. ಅನಿಲ್‌ಕುಮಾರ್ ತಿಳಿಸಿದ್ದಾರೆ.

# ಬಡ ಮಕ್ಕಳಿಗೆ ನೆರವಾಗಿ ಜನ್ಮದಿನ ಆಚರಿಸಿಕೊಂಡ ಕಾಂಗ್ರೆಸ್ ಮುಖಂಡ

ತುಮಕೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಎನ್.ಆರ್. ಹರೀಶ್ ಅವರು ಗ ಸಮಾಜ ಸೇವಾ ಕಾರ್ಯಗಳ ಮೂಲಕ ತಮ್ಮ 42 ನೇ ಹುಟ್ಟುಹಬ್ಬವನ್ನು ಅರ್ಥಪೂರ್ಣಾಗಿ ಆಚರಿಸಿಕೊಂಡರು.

ಆಚರಿಸಿಕೊಂಡರು. ಜನ್ಮದಿನದ ಅಂಗವಾಗಿ ಬೆಳಿಗ್ಗೆ ಸಿದ್ಧಗಂಗಾ ಮಠದಲ್ಲಿ ಡಾ. ಶಿವಕುಮಾರ ಸ್ವಾಮೀಜಿಗಳ ಗದ್ದಿಗೆಗೆ ಪೂಜೆ ಸಲ್ಲಿಸಿದರು. ನಂತರ ಶ್ರೀಮಠದ ಅಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಬಳಿಕ ಬೆಳ್ಳಾವಿಯ ಕಾರದೇಶ್ವರ ಮಠದಲ್ಲಿ ಕಾರದ ವೀರಬಸವ ಸ್ವಾಮೀಜಿಗಳ ದರ್ಶನ ಮಾಡಿ ಆಶೀರ್ವಾದ ಪಡೆದರು.ಶ್ರೀ ಮಠದ ವಿದ್ಯಾರ್ಥಿಗಳಿಗೆ ಎನ್.ಆರ್. ಹರೀಶ್ ಅವರು ಟ್ರಂಕ್ ಮತ್ತಿತರ ಪರಿಕರಗಳನ್ನು ವಿತರಿಸಿದರು.

ನಂತರ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು, ಬ್ರೆಡ್ ಹಂಚಿದರು. ಇದಲ್ಲದೆ ಅನಾಥ, ವಿಕಲಚೇತನ ಮಕ್ಕಳಿಗೆ ವಿವಿಧ ಸಾಮಗ್ರಿ ನೀಡಿ ನೆರವಾದರು.



ಈ ವೇಳೆ ಕಾಂಗ್ರೆಸ್ ಯುವ ಮುಖಂಡ ಎನ್ ಆರ್ ಹರೀಶ್ ಮಾತನಾಡಿ ಜನ್ಮದಿನದಂದು ಗುರುಗಳ ಆಶೀರ್ವಾದ ಪಡೆದಿದ್ದೇನೆ,ಗುರುಗಳ ಆಶೀರ್ವಾದ ಇದ್ದರೆ ಗುರಿ ಸಾಧಿಸಲು ಸಾಧ್ಯ ಅದೇ ರೀತಿ ಬೆಳ್ಳಾವಿ ಕಾರದ ಮಠದ ವಿದ್ಯಾರ್ಥಿಗಳಿಗೆ ಟ್ರಂಕ್ ವಿತರಣೆ ಮಾಡಲಾಗಿದೆ ,ಸರ್ಕಾರಿ ಆಸ್ಪತ್ರೆ ಬಡ ರೋಗಿಗಳಿಗೆ ಹಣ್ಣು ವಿತರಿಸಿ ಜನ್ಮದಿನ ಆಚರಿಸಿಕೊಂಡಿರುವುದು ಖುಷಿ ನೀಡಿದೆ,ಮುಂದಿನ ದಿನಗಳಲ್ಲೂ ಕೈಲಾದಷ್ಟು ಸಮಾಜ ಸೇವಾ ಕಾರ್ಯ ಮಾಡುವುದಾಗಿ ಹೇಳಿದರು.

ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಹಿರೇಹಳ್ಳಿ ಮಹೇಶ್, ಹಿರಿಯ ವಕೀಲ, ಕಾಂಗ್ರೆಸ್ ಮುಖಂಡ ಹಾಲನೂರು ಅನಂತಕುಮಾರ್, ಎಪಿಎಂಸಿ ಮಾಜಿ ಅಧ್ಯಕ್ಷ ಭೋವಿಪಾಳ್ಯ ಉಮೇಶ್, ಮುಖಂಡರಾದ ಪಾಲನೇತ್ರಯ್ಯ, ಹೆಬ್ಬೂರು ರಾಘವೇಂದ್ರ, ಕುಪ್ಪೂರು ಪಣಗಾರ್ ಶಿವಕುಮಾರ್, ವಿಷ್ಣುವರ್ಧನ್, ಹಿರೇಹಳ್ಳಿ ತನ್ವೀರ್, ಪ್ರಕಾಶ್, ಸುಭಾಷ್ ಪಟೇಲ್, ಧನಂಜಯ, ಚೇತನ್, ಎನ್.ಹೆಚ್. ಪ್ರಭಾಸ್ ಮೊದಲಾದವರು ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು.

# ಬಸ್ ಅವ್ಯವಸ್ಥೆಗೆ ಬೇಸತ್ತು ರಾಷ್ಟ್ರೀಯ ಹೆದ್ದಾರಿ ತಡೆದ ವಿದ್ಯಾರ್ಥಿಗಳು

## ಕಳ್ಳಿಪಾಳ್ಯಗೇಟ್‌ಬಳಿ ಹೆದ್ದಾರಿ ಬಂದ್; ಸರ್ಕಾರ ಹಾಗೂ ಕೆಎಸ್ಆರ್‌ಟಿಸಿ ವಿರುದ್ಧ ಆಕ್ರೋಶ; ಹೆಚ್ಚುವರಿ ಬಸ್‌ಗಳ ನಿಯೋಜನೆಗೆ ಒತ್ತಾಯ

ಸೂರ್ಯಪ್ರಗತಿನ್ಯೂಸ್.ಕಾಂ



ಗುಬ್ಬಿ.: ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ಗುಬ್ಬಿ ತಾಲೂಕಿನ ಕಳ್ಳಿಪಾಳ್ಯ ಗೇಟ್ ಸಮೀಪ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳು ಬುಧವಾರ ಬೆಳಿಗ್ಗೆ ಬೆಂಗಳೂರುಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ 73ರಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ವಿದ್ಯಾರ್ಥಿಗಳ ಪ್ರತಿಭಟನೆಯಿಂದ ಕೆಲಕಾಲ ಹೆದ್ದಾರಿಯಲ್ಲಿ ವಾಹನಗಳ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡು ಎರಡೂ ಬದಿಗಳಲ್ಲಿ ವಾಹನಗಳ ಉದ್ದ ಸಾಲು ನಿರ್ಮಾಣವಾಯಿತು.

ಕಳ್ಳಿಪಾಳ್ಯ ಗೇಟ್ ಸೇರಿದಂತೆ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ನೂರಾರು ವಿದ್ಯಾರ್ಥಿಗಳು ಪ್ರತಿದಿನ ಗುಬ್ಬಿ ಹಾಗೂ ತುಮಕೂರು ನಗರಗಳಿಗೆ ವಿದ್ಯಾಭ್ಯಾಸಕ್ಕಾಗಿ ಪ್ರಯಾಣಿಸುತ್ತಿದ್ದಾರೆ. ಆದರೆ ಈ ಮಾರ್ಗದಲ್ಲಿ ಸಂಚರಿಸುವ ಕೆಎಸ್ಆರ್‌ಟಿಸಿ ಬಸ್‌ಗಳು ನಿಲ್ದಾಣದಲ್ಲಿ ನಿಲ್ಲದೆ ವಿದ್ಯಾರ್ಥಿಗಳನ್ನು ಹತ್ತಿಸಿಕೊಳ್ಳದೆ ತೆರಳುತ್ತಿರುವುದು, ನಿಲ್ಲುವ ಕೆಲವೇ ಬಸ್‌ಗಳಲ್ಲಿ ಅತಿಯಾದ ಜನಸಂದಣಿ ಇರುವುದರಿಂದ ವಿದ್ಯಾರ್ಥಿಗಳು ಪ್ರತಿ ನಿತ್ಯ ಜೀವದ ಹಂಗು ತೊರೆದು ಪ್ರಯಾಣಿಸಬೇಕಾದ ದುಸ್ಥಿತಿ ಎದುರಿಸುತ್ತಿದ್ದಾರೆ. ಪರಿಣಾಮ ಅನೇಕ ವಿದ್ಯಾರ್ಥಿಗಳು ಶಾಲೆ ಮತ್ತು ಕಾಲೇಜುಗಳಿಗೆ ಸಮಯಕ್ಕೆ ಸರಿಯಾಗಿ ತಲುಪಲು ಸಾಧ್ಯವಾಗದೆ ತೊಂದರೆ ಅನುಭವಿಸುತ್ತಿದ್ದಾರೆ.

ಸಮಸ್ಯೆ ಕುರಿತು ಹಲವು ಬಾರಿ ಕೆಎಸ್ಆರ್‌ಟಿಸಿ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಗೆ ಮನವಿ ಸಲ್ಲಿಸಿದರೂ ಯಾವುದೇ ಸ್ಪಂದನೆ ದೊರೆಯದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ವಿದ್ಯಾರ್ಥಿಗಳು ರಾಷ್ಟ್ರೀಯ ಹೆದ್ದಾರಿಯಲ್ಲೇ ರಸ್ತೆ ತಡೆ ನಡೆಸಿ ತಮ್ಮ ಆಕ್ರೋಶ ಹೊರಹಾಕಿದರು.

ವಿಷಯ ತಿಳಿಯುತ್ತಿದ್ದಂತೆ ಜೆಡಿಎಸ್ ಮುಖಂಡ ಕಳ್ಳಿಪಾಳ್ಯ ಲೋಕೇಶ್ ಸ್ಥಳಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿದರು. ಬಳಿಕ ಗುಬ್ಬಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದರು. ಮಾಹಿತಿ ಪಡೆದ ಗುಬ್ಬಿ ವೃತ್ತ ನಿರೀಕ್ಷಕ (ಸಿಪಿಐ) ರಾಘವೇಂದ್ರ ನೇತೃತ್ವದ ಪೊಲೀಸ್ ತಂಡ ಸ್ಥಳಕ್ಕಾಗಮಿಸಿ ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂಪಡೆಯುವಂತೆ ಮನವೊಲಿಸಿತು. ನಂತರ ರಸ್ತೆ ತಡೆ ತೆರವುಗೊಳಿಸಿ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲಾಯಿತು.

ಬಡ ವಿದ್ಯಾರ್ಥಿಗಳ ಶಿಕ್ಷಣದೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ' ಕಳ್ಳಿಪಾಳ್ಯ ಲೋಕೇಶ್ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಜೆಡಿಎಸ್ ಮುಖಂಡ ಕಳ್ಳಿಪಾಳ್ಯ ಲೋಕೇಶ್, ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

"ಪ್ರತಿದಿನ ಬೆಳಿಗ್ಗೆ ಏಳು ಗಂಟೆಯಿಂದಲೇ ವಿದ್ಯಾರ್ಥಿಗಳು ಬಸ್‌ಗಾಗಿ ರಸ್ತೆ ಬದಿಯಲ್ಲಿ ಕಾಯುತ್ತಿದ್ದಾರೆ. ರೈತರು ಹಾಗೂ ಕೂಲಿ ಕಾರ್ಮಿಕರ ಕುಟುಂಬಗಳ ಮಕ್ಕಳು ಶಿಕ್ಷಣಕ್ಕಾಗಿ ನಿತ್ಯ ಸಂಕಷ್ಟ ಅನುಭವಿಸುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಅಗತ್ಯವಿರುವ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಉಚಿತ ಪ್ರಯಾಣ ಯೋಜನೆಯ ಬಳಿಕ ಈ ಮಾರ್ಗದಲ್ಲಿ ಬಸ್‌ಗಳ ಸಂಖ್ಯೆಯನ್ನು ಕಡಿಮೆ ಮಾಡಿರುವ ಪರಿಣಾಮ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಗಂಭೀರ ತೊಂದರೆಯಾಗಿದೆ. ಹತ್ತಾರು ಗ್ರಾಮಗಳ ನೂರಾರು ವಿದ್ಯಾರ್ಥಿಗಳು ಪ್ರತಿದಿನ ಅನುಭವಿಸುತ್ತಿರುವ ಸಂಕಷ್ಟವನ್ನು ನಾನು ಕಣ್ಣಾರೆ ಕಂಡಿದ್ದೇನೆ. ಸರ್ಕಾರ ತಕ್ಷಣವೇ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಿ ಶಾಶ್ವತ ಪರಿಹಾರ ಕಲ್ಪಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಈ ಸಂಬಂಧ ಕೆಎಸ್ಆರ್‌ಟಿಸಿ ಡಿಪೋ ವ್ಯವಸ್ಥಾಪಕರು ಹಾಗೂ ಜಿಲ್ಲಾಧಿಕಾರಿಗಳಿಗೆ ಲಿಖಿತ ಮನವಿ ಸಲ್ಲಿಸಲಾಗುವುದು," ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ನೂರಾರು ವಿದ್ಯಾರ್ಥಿಗಳು ಹಾಗೂ ಸ್ಥಳೀಯ ಸಾರ್ವಜನಿಕರು ಭಾಗವಹಿಸಿ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೂಡಲೇ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಸರ್ಕಾರ ಹಾಗೂ ಕೆಎಸ್ಆರ್‌ಟಿಸಿ ಅಧಿಕಾರಿಗಳನ್ನು ಒತ್ತಾಯಿಸಿದರು.

ಪ್ರತಿಭಟನೆಯ ಸಂದರ್ಭದಲ್ಲಿ ಗುಬ್ಬಿ ಪೊಲೀಸ್ ಠಾಣೆಯ ಸಿಬ್ಬಂದಿ ಸೂಕ್ತ ಬಂದೋಬಸ್ತ್ ಏರ್ಪಡಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಿದರು.

# ಗಡಿ ಭಾಗದ ಸರ್ಕಾರಿ ಶಾಲೆಗಳಿಗೆ ನೋಟ್ ಬುಕ್ ಲೇಖನ ಸಾಮಗ್ರಿ ವಿತರಣೆ



ಮಧುಗಿರಿ ಚೈತನ್ಯ ಸಿಂಚನ ಸಂಸ್ಥೆ ವತಿಯಿಂದ ಮಧುಗಿರಿ ತಾಲೂಕಿನ ಗಡಿ ಭಾಗದ ಸರ್ಕಾರಿ ಶಾಲೆಗಳಿಗೆ ವಿವಿಧ ಹೋಬಳಿಗಳ 120 ಶಾಲೆಗಳ 8000 ಮಕ್ಕಳಿಗೆ ನೋಟ್ ಬುಕ್ ಲೇಖನ ಸಾಮಗ್ರಿ ವಿತರಿಸಲಾಗಿದೆ ಎಂದು ಸಂಸ್ಥೆಯ ಪ್ರಧಾನ ದತ್ತಿ ಸಿವಿ ಕುಮಾರ್ ತಿಳಿಸಿದ್ದಾರೆ ಪಟ್ಟಣದ ಕೆ ಆರ್ ಬಡಾವಣೆಯ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ನೋಟ್ ಬುಕ್ ಲೇಖನ ಸಾಮಗ್ರಿ ವಿತರಿಸಿ ಮಾತನಾಡುತ್ತಾ ನಮ್ಮ ಸಂಸ್ಥೆ 16 ವರ್ಷಗಳಿಂದ ಈ ಕಾರ್ಯಕ್ರಮ ನಡೆಸುತ್ತಿದ್ದು ಪಟ್ಟಣದ ಮಕ್ಕಳಿಗೆ ಹೋಲಿಸಿದರೆ ಗ್ರಾಮಾಂತರ ಪ್ರದೇಶದ ಮಕ್ಕಳು ಪ್ರತಿಭಾವಂತ ಮಕ್ಕಳಾಗಿದ್ದು ಅವರಿಗೆ ಪ್ರೋತ್ಸಾಹ ನೀಡುವುದು ಅತ್ಯವಶ್ಯಕವಾಗಿದೆ ಮಕ್ಕಳು ಈ ಸೌಲಭ್ಯ ಪಡೆದುಕೊಂಡು ಉತ್ತಮ ಶಿಕ್ಷಣ ಪಡೆಯಬೇಕು ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯ ಸಹಕಾರ ಮನೋಭಾವ ಒಗ್ಗಟ್ಟಿನಿಂದ ಬಾಳುವುದನ್ನು ಕಲಿಯಬೇಕು ಮುಂದಿನ ದಿನಗಳಲ್ಲಿ ಕನಕಪುರ ಚಿಕ್ಕಬಳ್ಳಾಪುರ ತಾಲೂಕಿನ ಹಲವು ಶಾಲೆಗಳಲ್ಲಿ ನೋಟ್ ಬುಕ್ ಲೇಖನ ಸಾಮಗ್ರಿ ವಿತರಿಸುವ ಗುರಿಯಿದೆ ಈ ಸಾಲಿನಲ್ಲಿ 160 ಶಾಲೆಗಳ 9 6 0 9 ಮಕ್ಕಳಿಗೆ ಇದೇ ಅಲ್ಲದೆ ಡಿಸೆಂಬರ್ ತಿಂಗಳಲ್ಲಿ ಕೇಂದ್ರೀಕೃತ ಸ್ಥಳದಲ್ಲಿ ರಸಪ್ರಶ್ನೆ ವಿಜ್ಞಾನ ವಸ್ತು ಪ್ರದರ್ಶನ ಪ್ರತಿಭಾ ಪುರಸ್ಕಾರ ಮುಂತಾದ ಕಾರ್ಯಕ್ರಮಗಳನ್ನು ನಡೆಸಿ ಶಾಲೆಗೆ ಬೇಕಾದ ವಸ್ತುಗಳನ್ನು ಬಹುಮಾನವಾಗಿ ನೀಡಲಾಗುವುದು ಮುಂದಿನ ಎಸ್ ಎಸ್ ಎಲ್ ಸಿ ಮಕ್ಕಳಿಗೆ ವಿಶೇಷ ತರಬೇತಿ ಶಿಬಿರ ನಡೆಸಲಾಗುವುದು ಹೆಣ್ಣು ಮಕ್ಕಳಿಗಾಗಿ ಸುರಕ್ಷತೆ ನೈರ್ಮಲ್ಯದ ಬಗ್ಗೆ ಶಿಬಿರ ನಡೆಸಲಾಗುವುದು




ದಿನಾಂಕ:1-7-2026 ರಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು ಕೃಷಿ ಇಲಾಖೆಯ ಯೋಜನೆಗಳು ಮತ್ತು ತಾಂತ್ರಿಕ ಮಾಹಿತಿ ಸರಣಿ ಸಂವಹನ ಕೃಷಿ ಕಣಜ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಒಟ್ಟು 31 ವಿಷಯಗಳ ಕುರಿತಾದ ಸರಣಿ ಕಾರ್ಯಕ್ರಮದ ಉದ್ಘಾಟನೆಯು ಕೃಷಿ ಇಲಾಖೆ ತುಮಕೂರು ಹಾಗೂ ರೇಡಿಯೋ ಸಿದ್ಧಾರ್ಥ 90.8 ಈಒ ಸಹಯೋಗದಲ್ಲಿ ನೆರವೇರಿತು.

# ರೈತರು ಬೆಳೆ ವಿಮೆಗೆ ನೊಂದಾಯಿಸಿಕೊಳ್ಳುವಂತೆ ಕೃಷಿ ಇಲಾಖೆ ಮನವಿ

ಕೊರಟಗೆರೆ : ತಾಲ್ಲೂಕಿನ 2026-27 ನೇ ಸಾಲಿನ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯನ್ನು ಜಾರಿಗೊಳಿಸಿದ್ದು, ವಿವಿಧ ವಿಮಾ ಘಟಕಗಳಲ್ಲಿ ಅಧಿಸೂಚಿಸಲಾದ ಬೆಳೆಗಳಿಗೆ ಬೆಳೆ ಸಾಲ ಪಡೆದ ಹಾಗೂ ಸಾಲ ಪಡೆಯದ ರೈತ ಬಾಂಧವರು ಶೇಂಗಾ(ನೀ), ತೊಗರಿ(ಮ.ಆ), ಬೆಳೆಗಳಿಗೆ ಜುಲೈ15, ಮುಸುಕಿನ ಜೋಳ(ಮ.ಆ) ಮತ್ತು ಮುಸುಕಿನ ಜೋಳ(ನೀ) ಬೆಳೆಗಳಿಗೆ ಜುಲೈ31, ಹಾಗೂ ಭತ್ತ(ನೀ), ಶೇಂಗಾ(ಮ.ಆ), ರಾಗಿ(ಮ.ಆ), ರಾಗಿ(ನೀ) ಮತ್ತು ಹುರುಳಿ(ಮ.ಆ) ಬೆಳೆಗಳಿಗೆ ಆಗಸ್ಟ್ 14 ಬೆಳೆವಿಮೆಗೆ ನೋಂದಾಯಿಸಿಕೊಳ್ಳಲು ಕಡೆ ದಿನಾಂಕವಾಗಿದ್ದು, ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಸಹಾಯಕ ಕೃಷಿ ನಿರ್ದೇಶಕರಾದ ಕಲ್ಲೇಶ್ ಪ್ರಸಾದ್ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈಗಾಗಲೇ ತಾಲ್ಲೂಕಿನಲ್ಲಿ ಸುಮಾರು 513 ಜನ ರೈತರು ಕೃಷಿ ಬೆಳೆಗಳಿಗೆ ಬೆಳೆ ವಿಮೆ ನೊಂದಾಯಿಸಿದ್ದು, ಬ್ಯಾಂಕ್‌ಗಳಲ್ಲಿ ಸಾಲ ಪಡೆದ ಹಾಗೂ ಸಾಲ ಪಡೆಯದ ರೈತರು ಭತ್ತ, ಶೇಂಗಾ, ರಾಗಿ ಮತ್ತು ಹುರುಳಿ ಬೆಳೆಗಳಗೆ ಬೆಳೆ ವಿಮೆ ನೊಂದಾಯಿಸಲು ಆಗಸ್ಟ್ 14 ಕೊನೆ ದಿನಾಂಕ ಆಗಿರುತ್ತದೆ. ಆದ್ದರಿಂದ ರೈತರು ತಮ್ಮ ವ್ಯಾಪ್ತಿಯ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ, ಗ್ರಾಮ ಒನ್ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳಲು ತಿಳಿಸಿದ್ದಾರೆ.

# ತುಮಕೂರು: ಯುವನಿಧಿ ಯೋಜನೆ ಸ್ವಯಂ ಘೋಷಣೆ ಕಡ್ಡಾಯ

ತುಮಕೂರು: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ "ಯುವನಿಧಿ ಯೋಜನೆ" ಯಲ್ಲಿ ನೋಂದಾಯಿಸಿಕೊಂಡಿರುವ ಅಭ್ಯರ್ಥಿಗಳು ಜಾಲತಾಣ **https://sevasindhuservices.karnataka.gov.in** ಮೂಲಕ ಕಡ್ಡಾಯವಾಗಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂದು ಪರಿಶೀಲಿಸಿಕೊಳ್ಳತಕ್ಕದ್ದು. ಈಗಾಗಲೇ ನೋಂದಾಯಿಸಿಕೊಂಡು ಯೋಜನೆಯಡಿ ಹಣವನ್ನು ಪಡೆಯುತ್ತಿರುವ ಫಲಾನುಭವಿಗಳು "ಸ್ವಯಂ ಘೋಷಣೆ" ಮಾಡತಕ್ಕದ್ದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಸೂಚಿಸಿದ್ದಾರೆ.

ಇನ್ನು ಮುಂದೆ ಫಲಾನುಭವಿಗಳು ಸ್ವಯಂ ಘೋಷಣೆಯನ್ನು ತ್ರೈಮಾಸಿಕದ ಬದಲಾಗಿ ಪ್ರತಿ ತಿಂಗಳಿಗೊಮ್ಮೆ(ಮಾಸಿಕ) ಸಲ್ಲಿಸತಕ್ಕದ್ದು. ಸ್ವಯಂ ಘೋಷಣೆಯನ್ನು ಪ್ರತಿ ತಿಂಗಳ 25ರೊಳಗಾಗಿ ಮಾಡಿಕೊಳ್ಳಬೇಕು.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ದೂರವಾಣಿ: 0816-2278488ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜು. 7ರಂದು ಅಬಕಾರಿ ಸನ್ನದುಗಳ ಇ-ಹರಾಜು ತರಬೇತಿ

ತುಮಕೂರು.: ಅಬಕಾರಿ ಇಲಾಖೆಯು ತುಮಕೂರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸನ್ನದುಗಳಿಗೆ ಸಂಬಂಧಿಸಿದಂತೆ ಇ-ಹರಾಜಿನಲ್ಲಿ ಭಾಗವಹಿಸುವ ಆಸಕ್ತ ಸಂಭಾವ್ಯ ಬಿಡ್ಡುದಾರರು ಹಾಗೂ ಅಬಕಾರಿ ಅಧಿಕಾರಿ/ಸಿಬ್ಬಂದಿಗಾಗಿ ನಗರದ ಕನ್ನಡ ಭವನದಲ್ಲಿ ಜುಲೈ 7ರಂದು ಬೆಳಿಗ್ಗೆ 11 ಗಂಟೆಗೆ ಇ-ಹರಾಜು ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತರು ತರಬೇತಿಗೆ ಹಾಜರಾಗಿ ಸದುಪಯೋಗಪಡೆದುಕೊಳ್ಳಬೇಕೆಂದು ಅಬಕಾರಿ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈದ್ಯ ವೃತ್ತಿಯ ಬಿಳಿಕೋಟು ಜವಾಬ್ದಾರಿ, ವಿನಯದ ಸಂಕೇತ" ಕುಲಪತಿ: ಡಾ.ಬಿ.ಕೆ.ರವಿ

ಸೂರ್ಯಪ್ರಗತಿನ್ಯೂಸ್.ಕಾಂ




ಶ್ರೀದೇವಿ ಫಿಸಿಯೋಥೆರಪಿ ಕಾಲೇಜಿನಲ್ಲಿ ಪದವಿ ಪ್ರದಾನ ಸಮಾರಂಭ ವೈದ್ಯ ವೃತ್ತಿ ಜವಾಬ್ದಾರಿ, ವಿನಯದ ಸಂಕೇತ: ಕುಲಪತಿ: ಡಾ.ಬಿ.ಕೆ.ರವಿ

ತುಮಕೂರು: "ಬಿಳಿಕೋಟು ಜವಾಬ್ದಾರಿ ಮತ್ತು ವಿನಯದ ಸಂಕೇತ" ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಕೆ. ರವಿರವರು ಹೇಳಿದ್ದಾರೆ.

ನಗರದ ಶಿರಾರಸ್ತೆಯ ಶ್ರೀದೇವಿ ಪಿಜಿಯೋಥೆರಪಿ ಕಾಲೇಜಿನ ಘಟಿಕೋತ್ಸವ ಸಮಾರಂಭವನ್ನು ಜುಲೈ 2 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಆಸ್ಪತ್ರೆಯ ಅಡಿಟೋರಿಯಂ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿದ್ದ ಡಾ.ಬಿ.ಕೆ.ರವಿರವರು ಮಾತನಾಡುತ್ತಾ 'ವೈದ್ಯರು ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ' ಕೆಲಸ ಮಾಡುವ ಸಿಬ್ಬಂದಿ ರಾಷ್ಟ್ರೀಯ ಆಸ್ತಿ. ಹೀಗಾಗಿ ಪ್ರತಿ ವ್ಯಕ್ತಿಗೂ ವೈದ್ಯರ ಅವಶ್ಯಕತೆ ಬಹಳವಾಗಿರುತ್ತದೆ. ಆದ್ದರಿಂದ ವೃತ್ತಿಯಲ್ಲಿ ನ್ಯಾಯ, ನೀತಿ, ಧರ್ಮ ಪಾಲಿಸುವುದು ನಿಮ್ಮ ನಿತ್ಯ ಮಂತ್ರವಾಗಬೇಕು. ನಾಳೆಯಿಂದ ಹೊಸ ಜೀವನ, ಸಮಾಜ ನಿಮ್ಮನ್ನು ಮೌಲ್ಯಮಾಪನ ಮಾಡುತ್ತದೆ. ಮಹಿಳೆಯರು ಮಕ್ಕಳು ವೃದ್ಧರು, ಪುನರ್ವಸತಿ ಕೇಂದ್ರಗಳಿಗೆ ನಿಮ್ಮ ಸೇವೆ ಅತ್ಯಂತ ಮುಖ್ಯವಾಗಿದೆ ಮತ್ತು ಜಗತ್ತಿನಾದ್ಯಂತ ವ್ಯಾಪಕವಾಗಿ ಬೆಳೆಯುತ್ತಿರುವ ಮತ್ತು ಬೇಡಿಕೆ ಇರುವ ಮತ್ತು ಹೆಚ್ಚು ಉದ್ಯೋಗ ನೀಡುವ ಕ್ಷೇತ್ರವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಯಾಗಿದ್ದ ರಾಜ್ಯ ಕನಕಶ್ರೀ ಪ್ರಶಸ್ತಿ ಪುರಸ್ಕೃತ ತತ್ವಜ್ಞಾನಿ ಡಾ.ವ್ಯಾಸನಕೆರೆ ಪ್ರಭಂಜನಾಚಾರ್ಯರವರು ಮಾತಾನಾಡಿ, ಡಿವೈನ್ ಥೆರಪಿಗಿಂತ ಮಿಗಿಲಾದದ್ದು ಜಾಗತ್ತಿನಲ್ಲಿ ಇಲ್ಲ. ವೈದ್ಯರು ರೋಗಿಗಳಿಗೆ ಥೆರಪಿ ನೀಡಿ ಗುಣಪಡಿಸುತ್ತಾರೆ. ಆದರೆ ಡಿವೈನ್ ಥೆರಪಿ ವೈದ್ಯರಿಗೂ ಬೇಕು. ರೋಗಿಗೂ ಬೇಕು. ಹೀಗಾಗಿ ಅದರ ಶಕ್ತಿ ಮತ್ತು ಮಹತ್ವ ಮಿಗಿಲಾದದ್ದು. ಸಾಮಾನ್ಯವಾಗಿ ವೈದ್ಯರನ್ನು ದೇವರು ಮತ್ತು ನಾರಾಯಣ ಎಂಬ ಪೂಜ್ಯ ಭಾವನೆಯಿಂದ ನೋಡಲಾಗುತ್ತಿದೆ. ಆದರೆ ವೈದ್ಯರ ಪಾಲಿಗೆ ರೋಗಿಗಳೇ ದೇವರು ಅವರು ಏನೇ ಸಾಧನೆ, ಹೆಸರು ಮಾಡಬೇಕಾದರೂ ಅದಕ್ಕೆ ಮೂಲ ಕಾರಣ ರೋಗಿಗಳೇ ಆಗಿರುತ್ತಾರೆ ಹೀಗಾಗಿ ರೋಗಿಗಳನ್ನು ಗೌರವದಿಂದ ಕಾಣುವುದು ಉಪಚರಿಸುವುದು ಅವರ ನಿತ್ಯ ಕಾಯಕವಾಗಬೇಕು ಎಂದು ಕಿವಿಮಾತು ಹೇಳಿದರು.

ಅಂತಿಮವಾಗಿ ಎಲ್ಲ ಶಕ್ತಿಗಳು, ಎಲ್ಲಾ ಮಾನವರು ದೇವರಿಗೆ ಶರಣಾಗುವುದು ಹೀಗಾಗಿ ಡಿವೈನ್ ಥೆರಪಿ, ಶಕ್ತಿ ಮುಂದೆ ಮನುಷ್ಯನ ಪ್ರಯತ್ನ ಏನೇನು ಇಲ್ಲ ಎಂಬುದನ್ನು ಅರಿತು ನಡೆಯಬೇಕು. ವಿಶೇಷವಾಗಿ ವೈದ್ಯಕೀಯ ವೃತ್ತಿಯಲ್ಲಿ ತೊಡಗುವವರಿಗೆ ಅವರಿಗೆ ತಾಯಿ ಹೃದಯ ಇರಬೇಕು. ವೈದ್ಯರು ರೋಗಿಯ ಖಾಯಿಲೆಯನ್ನು ವಾಸಿ ಮಾಡಬಹುದು. ಆದರೆ ನೆಮ್ಮದಿ, ಮನಶಾಂತಿಯನ್ನು ದೈವಿಕ ಶಕ್ತಿಯಿಂದ ಮಾತ್ರ ಪಡೆಯಲು ಸಾಧ್ಯ ಹೀಗಾಗಿ ವೈದ್ಯರಿಗಿಂತಲೂ ದೈವಿಕ ಶಕ್ತಿ ಪರಿಣಾಮಕಾರಿ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯಅತಿಥಿಯಾದ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಸಗೋಡು ಜಯಸಿಂಹರವರು ಮಾತನಾಡಿ, ಜೀವನದಲ್ಲಿ ಭಗವಂತನ ಪ್ರೇರಣೆ ಹಾಗೂ ಮನಸ್ಸಿನ ಶಾಂತಿ-ನೆಮ್ಮದಿ ಅತ್ಯಂತ ಮುಖ್ಯವೆಂದು ತಿಳಿಸಿದರು. ಪದವಿ ಪಡೆದ ಎಲ್ಲಾ ವಿದ್ಯಾರ್ಥಿಗಳು ತಮ್ಮ ಭವಿಷ್ಯದಲ್ಲಿ ಯಶಸ್ಸು ಸಾಧಿಸಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್ ರವರು ಮಾತನಾಡಿ, ನಿಮ್ಮ ಜ್ಞಾನ ಉತ್ತಮ ಸಮಾಜ ನಿರ್ಮಾಣಕ್ಕೆ ಅಡಿಪಾಯವಾಗವೇಕು. ಪ್ರತಿದಿನ ಹೊಸದನ್ನು ಕಲಿಯುವ ಇಚ್ಚಾ ಶಕ್ತಿಯನ್ನು ನಿಮ್ಮದಾಗಬೇಕು. ಶ್ರೀದೇವಿ ಸಂಸ್ಥೆಯ ಸಮಗ್ರ ಬೆಳವಣಿಗೆಗೆ ಕಮಲೇಶ್ ದಂಪತಿಗಳು ಬೆನ್ನಲಬಾಗಿ ನಿಂತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಫಿಜಿಯೋಥೆರಪಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಎ.ಆನಂದಿರವರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. 47 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ನಿರ್ದೇಶಕ ಹಾಗೂ ಟ್ರಸ್ಟಿಯಾದ ಡಾ. ರಮಣ್ ಎಂ. ಹುಲಿನಾಯ್ಕರ್, ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿ ಹಾಗೂ ನೇತ್ರತಜ್ಞರಾದ ಡಾ.ಲಾವಣ್ಯ ಮತ್ತು ಹಿರಿಯ ಪರ್ತಕರ್ತ ಡಾ.ಕೆ.ಆರ್. ಕಮಲೇಶ್, ಲೇಖಿಕಿ ಭಾರತಿ ಮುಂತಾದವರು ಉಪಸ್ಥಿತರಿದ್ದರು.

ಹುಲಿನಾಯ್ಕರ್ ವಿಚಾರ ಹೊಸ ಸಂಚಿಕೆ ಬಿಡುಗಡೆ:

ಕಳೆದ 42 ತಿಂಗಳಿನಿಂದ ಶ್ರೀದೇವಿ ಚಾರಿಟಬಲ್ ಟ್ರಸ್ಟ್ ಆಶ್ರಯದಲ್ಲಿ ಪ್ರಕಟವಾಗುತ್ತಿದ್ದ ಶ್ರೀದೇವಿ ಅಂತರಂಗ ಹೆಸರು ಬದಲಾಗಿದ್ದುಈಗ ಹುಲಿನಾಯ್ಕರ್ ವಿಚಾರ ಎಂಬ ಹೆಸರಿನಲ್ಲಿ ಪ್ರಕಟವಾಗುತ್ತಿದ್ದು, ಹೊಸ ಸಂಚಿಕೆಯನ್ನು ಗಣ್ಯರ ಸಮ್ಮುಖದಲ್ಲಿ ಬಿಡುಗಡೆ ಮಾಡಲಾಯಿತು. ಆಧ್ಯಾತ್ಮ, ಶಿಕ್ಷಣ, ಸಮಾಜ ಸೇವೆಗೆ ಮೀಸಲಾಗಿ ಪತ್ರಿಕೆ ಹೊರ ಬರುತ್ತಿದೆ. ಇಂಟರ್‌ನೆಟ್ ಆವೃತ್ತಿಯನ್ನು ಲಕ್ಷಾಂತರ ಜನ ಓದುತ್ತಿದ್ದಾರೆ. ಸಮಾಜ ಸುಧಾಕರು, ವೈದ್ಯರು, ವೃತ್ತಿಪರ ಪತ್ರಕರ್ತರು, ಇಂಜಿನಿಯರ್‌ಗಳು, ಅಧ್ಯಾಪಕರು, ವಿದ್ಯಾರ್ಥಿಗಳು ಈ ಪತ್ರಿಕೆಗೆ ಬರೆಯುತ್ತಿದ್ದಾರೆ ಎಂದು ಗೌರವ ಸಂಪಾದಕ ಡಾ.ಕೆ.ಆರ್. ಕಮಲೇಶ್ ವಿವರಿಸಿದರು.

# ನಾವೆಲ್ಲರೂ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಂಡು

## ನೆಮ್ಮದಿಯ ಬದುಕನ್ನು ನಡೆಸುತ್ತಿದ್ದೇವೆ. ಎಂದರೆ ಅದಕ್ಕೆ ವೈದ್ಯರ ಕೊಡುಗೆ ಅಪಾರ

ಸೂರ್ಯಪ್ರಗತಿನ್ಯೂಸ್.ಕಾಂ



ಕೊರಟಗೆರೆ: ವೈದ್ಯರ ಸೇವಾ ಕಾರ್ಯಕ್ಕೆ ಬೆಲೆ ಕಟ್ಟಲಾಗದು, ಇಂದು ಜಗತ್ತಿನಲ್ಲಿ ನಾವೆಲ್ಲರೂ ಉತ್ತಮ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಂಡು ನೆಮ್ಮದಿಯ ಬದುಕನ್ನು ನಡೆಸುತ್ತಿದ್ದೇವೆ. ದೇಶ ಅಭಿವೃದ್ಧಿಯ ಹಾದಿಯಲ್ಲಿ ಸಾಗುತ್ತಿದೆ ಎಂದರೆ ಅದಕ್ಕೆ ವೈದ್ಯರ ಕೊಡುಗೆ ಅಪಾರ ಎಂದು ಕೊರಟಗೆರೆ ಸರ್ಕಾರಿ ಆಸ್ಪತ್ರೆ ಕೀಲು ಮೂಳೆ ತಜ್ಞರಾದ ಡಾ.ಪುರುಷೋತ್ತಮ್ ತಿಳಿಸಿದರು.

ಪಟ್ಟಣದ ಜೆ.ಕೆ.ಮೆಮೋರಿಯಲ್ ಸೆಂಟ್ರಲ್ ಸ್ಕೂಲ್ ಆವರಣದಲ್ಲಿ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ಮೈ ಭಾರತ್-ಮೇರಾ ಯುವ ಭಾರತ್, ಕೊರಟಗೆರೆಯ ಸಾರ್ವಜನಿಕ ಆಸ್ಪತ್ರೆ ಹಾಗೂ ಮಹಾತ್ಮಗಾಂಧಿ ಯುವಕ ಸಂಘದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವು ವೈದ್ಯರನ್ನು ಹಾಗೂ ಅವರ ಸೇವೆಯನ್ನು ಸ್ಮರಿಸಬೇಕು, ಎಲ್ಲರ ಸಹಕಾರದಿಂದ ನಾವೆಲ್ಲರೂ ಉತ್ತಮ ಆರೋಗ್ಯವಂತರಾಗಿ ಉತ್ತಮ ದೇಶ ಕಟ್ಟುವ ಕೆಲಸ ಆಗಬೇಕಿದೆ ಎಂದರು.

'ಒತ್ತಡದ ಜೀನವ ಶೈಲಿ, ಆಹಾರ, ನೀರು ಹಾಗೂ ಪರಿಸರವು ಕಲುಷಿತಗೊಂಡಂತೆ ನಮ್ಮ ಆರೋಗ್ಯದಲ್ಲಿ ಸಮಸ್ಯೆಗಳು ಹೆಚ್ಚುತ್ತಿವೆ. ಅಪಘಾತ, ದುಶ್ಚಟಗಳಿಂದ ಅನಾರೋಗ್ಯವು ಕಾಡುತ್ತಿದೆ. ಹೀಗಾಗಿ ವೈದ್ಯರ ಸೇವೆ, ಆಸ್ಪತ್ರೆಗಳ ತುರ್ತು ಸೇವೆ, ಸೌಲಭ್ಯಗಳು ಪ್ರತಿಯೊಬ್ಬರಿಗೂ ಲಭಿಸುವುದು ಕಷ್ಟವಾಗುತ್ತಿದೆ. ಅದಕ್ಕಾಗಿ ಉತ್ತಮ ಆರೋಗ್ಯಕ್ಕೆ ಮುನ್ನೆಚ್ಚರಿಕೆ ಕ್ರಮಗಳು ಅಗತ್ಯವಾಗಿವೆ' ಎಂದರು.

ವೈದ್ಯ ಲೋಕದ ದಿಗ್ಗಜ ಬಿ.ಸಿ.ರಾಯ್ ಅವರು ಆರೋಗ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳನ್ನು ಗೌರವಿಸಲು ಅವರು ಹುಟ್ಟಿದ ದಿನ ಜುಲೈ 1ರಂದು ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ ಎಂದು ಹೇಳಿದರು.

ಜೆ.ಕೆ.ಮೆಮೋರಿಯಲ್ ಸೆಂಟ್ರಲ್ ಸ್ಕೂಲ್‌ನ ಪ್ರಾಚಾರ್ಯ ಸುಭಾಷ್ ಮಾತನಾಡಿ, ಪ್ರಸ್ತುತ ಆರೋಗ್ಯವನ್ನು ಕಾಪಾಡಿಕೊಳ್ಳುವುದೇ ಸವಾಲಾಗಿರುವಾಗ ವೈದ್ಯರ ಆರೈಕೆ ಪ್ರಮುಖವಾದದ್ದು. ವೈದ್ಯರನ್ನು ವೈದ್ಯೋ ನಾರಾಯಣೋ ಹರಿ ಎಂದು ದೇವರಿಗೆ ಸಮಾನರಾದವರೆಂದು ನೆನಪಿಸಿಕೊಳ್ಳುತ್ತೇವೆ. ವೈದ್ಯರೆಂದರೆ ನಂಬಿಕೆ, ವಿಶ್ವಾಸ, ಭರವಸೆ, ಮಾನವೀಯತೆಯ ಮೂರ್ತ ರೂಪಗಳಾದ ವೈದ್ಯರು ಅಗೋಚರವಾದ ನೋವನ್ನು ಶಮನ ಮಾಡಿ ಆರೋಗ್ಯಯುತ ಸಮಾಜಕ್ಕೆ ಆರೋಗ್ಯವಂತ ವ್ಯಕ್ತಿಗಳ ನಿರ್ಮಿತಿಗೆ ಅವರ ಸೇವೆ ಅನುಪಮವಾದದ್ದು ಎಂದರು.

ವೈದ್ಯರು ಜನಾನುರಾಗಿಯಾಗಿ, ಉತ್ತಮ ಗುಣಮಟ್ಟದ ಸೇವೆ ಸಲ್ಲಿಸಬೇಕು. ಗ್ರಾಮೀಣ, ಬಡವರಿಗಾಗಿ ವೈದ್ಯರ ಸೇವೆಯ ಹೆಚ್ಚಿನ ಅಗತ್ಯವಿದೆ ಎಂದು ಸಲಹೆ ನೀಡಿದರು.

ಪಶ್ಚಿಮ ಬಂಗಾಳದ ವೈದ್ಯ ಬಿ.ಸಿ. ರಾಯ್ ಅವರ ನೆನಪಿಗೋಸ್ಕರವೇ ರಾಷ್ಟ್ರೀಯ ವೈದ್ಯ ದಿನಾಚರಣೆ ನಡೆಸಲಾಗುತ್ತಿದೆ ಎಂದರು.

ತಮ್ಮನ್ನು ನಂಬಿ ಬರುವ ರೋಗಿಗಳಿಗೆ ಒಳ್ಳೆಯ ಗುಣಮಟ್ಟದ ಸೇವೆಯನ್ನು ವೈದ್ಯರು ನೀಡಬೇಕು. ಅದುವೇ ವೈದ್ಯ ವೃತ್ತಿ ಧರ್ಮ. ಉತ್ತಮ ವೈದ್ಯರಾಗಿ ವೃತ್ತಿ ಗೌರವ ತರಬೇಕು ಎಂದು ಹೇಳಿದರು.

ಜೆ.ಕೆ.ಮೆಮೋರಿಯಲ್ ಸೆಂಟ್ರಲ್ ಸ್ಕೂಲ್‌ನ ಆಡಳಿತ ಮಂಡಳಿ ಸದಸ್ಯೆ ಉಮಾ ಜಗದೀಶ್ ಮಾತನಾಡಿ,

ಹಗಲು-ರಾತ್ರಿ ಎನ್ನದೇ ರೋಗಿಗಳ ನಿರಂತರ ಸೇವೆಯಲ್ಲಿ ತೊಡಗುವ ವೈದ್ಯರನ್ನು ಪ್ರತಿಯೊಬ್ಬರು ಗೌರವಿಸಬೇಕು. ಜೀವನವನ್ನು ಸುಲಭಗೊಳಿಸಲು, ದೇಹವನ್ನು ಆರೋಗ್ಯವಾಗಿಡುವುದು ಅತ್ಯಂತ ಮುಖ್ಯ. ರೋಗಗಳಿಂದ ದೂರವಿದ್ದರೆ, ನೀವು ಜೀವನದ ಪ್ರತಿ ಕ್ಷಣವನ್ನು ಸಂತೋಷದಿಂದ ಬದುಕಲು ಸಾಧ್ಯವಾಗಲಿದ್ದು, ವೈದ್ಯರು ನಮ್ಮನ್ನು ರೋಗಗಳಿಂದ ದೂರವಿಡುವ ಕಾಯಕ ಮಾಡುತ್ತಿದ್ದಾರೆ ಎಂದರು.

ಜೆ.ಕೆ.ಮೆಮೋರಿಯಲ್ ಸೆಂಟ್ರಲ್ ಸ್ಕೂಲ್‌ನ ಆಡಳಿತ ಮಂಡಳಿ ಮತ್ತೋರ್ವ ಸದಸ್ಯೆ ಸುಧಾರಾಣಿ ಮಾತನಾಡಿ, ಅನಾರೋಗ್ಯದ ಸಂದರ್ಭದಲ್ಲಿ ನಮ್ಮನ್ನು ಗುಣಪಡಿಸಿ, ಮರುಜೀವ ನೀಡುವ ವೈದ್ಯರು ನಿಜಕ್ಕೂ ದೇವರ ಸ್ವರೂಪಿ ಎಂದರೆ ತಪ್ಪಲಾಗುವುದಿಲ್ಲ ಎಂದು ತಿಳಿಸಿದರು.

'ಸುರಕ್ಷಿತ ಆರೋಗ್ಯಕ್ಕಾಗಿ ವೈದ್ಯರು ನೀಡುವ ಯಾವದೇ ಸಲಹೆ, ಮಾರ್ಗದರ್ಶನವನ್ನು ರೋಗಿಗಳು ಪಾಲಿಸುವುದು ಮುಖ್ಯವಾಗಿದೆ' ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೊರಟಗೆರೆ ಸರ್ಕಾರಿ ಆಸ್ಪತ್ರೆಯಲ್ಲಿ ಕೀಲು ಮೂಳೆ ತಜ್ಞರಾಗಿ ಉತ್ತಮ ಸೇವೆ ಸಲ್ಲಿಸುತ್ತಿರುವ ಡಾ.ಪುರುಷೋತ್ತಮ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜೆ.ಕೆ.ಮೆಮೋರಿಯಲ್ ಸೆಂಟ್ರಲ್ ಸ್ಕೂಲ್‌ನ ಉಪ ಪ್ರಾಚಾರ್ಯೆ ವಸುಂಧರ, ಜಿ.ವಿ.ವೀರೇಂದ್ರ ಪ್ರಸಾದ್, ಜಿಲ್ಲಾ ಯುವಜನ ಒಕ್ಕೂಟದ ಅಧ್ಯಕ್ಷೆ ಇಂದ್ರ ಎಂ.ಪ್ರಸಾದ್, ಕಾರ್ಯದರ್ಶಿ ಕಾರ್ತಿಕ್, ಕಾಲೇಜಿನ ಉಪನ್ಯಾಸಕ ವರ್ಗ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ತ್ಯಾಗಟೂರು ಪ್ರೌಢಶಾಲೆ NMMSನಲ್ಲಿ ಜಿಲ್ಲೆಗೆ ಪ್ರಥಮ

ಸೂರ್ಯಪ್ರಗತಿನ್ಯೂಸ್.ಕಾಂ

ನಗರದ ಬಿ ಹೆಚ್ ರಸ್ತೆಯ ಎಸ್ ಐ ಟಿ ಕಾಲೇಜಿನ ಮೀಡಿಯಾ ಸೆಂಟರ್ ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಓಒಒಖ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಆಯ್ಕೆಯಾದ ತ್ಯಾಗಟೂರು ಸರ್ಕಾರಿ ಪ್ರೌಢಶಾಲೆಯ 9 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳು ಪ್ರಶ್ನಿಸದೇ ಯಾವುದನ್ನೂ ಒಪ್ಪಬಾರದು. ಚಿಕ್ಕ ವಯಸ್ಸಿನಿಂದಲೇ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳುವುದರ ಮೂಲಕ ಜ್ಞಾನವನ್ನು ಸಂಪಾದಿಸಬೇಕು. ಹೆಚ್ಚು ವಿದ್ಯಾರ್ಥಿಗಳು ಆಯ್ಕೆಯಾಗುವ ಮೂಲಕ ಜಿಲ್ಲೆಯಲ್ಲಿ ಮೊದಲ ಸ್ಥಾನ ಪಡೆದದ್ದಕ್ಕಾಗಿ ಅಭಿನಂದನೆಗಳು ಎಂದು ರೋಟರಿ ಜಿಲ್ಲಾ ಗೌರ್ನರ್ ಡಾ. ಎಲಿಜಬೆತ್ ಚೆರಿಯನ್ ತಿಳಿಸಿದರು.

ರೋಟರಿ ತುಮಕೂರು ಪ್ರೇರಣದ ಅಧ್ಯಕ್ಷ ಉಮಾಮಹೇಶ್ ಮಾತನಾಡಿ ಓಒಒಖನಲ್ಲಿ ಸರ್ಕಾರಿ ಪ್ರೌಢಶಾಲೆ ಜಿಲ್ಲೆಯಲ್ಲೇ ಮೊದಲ ಸ್ಥಾನ ಪಡೆದಿರುವುದು ಹೆಮ್ಮೆಯ ವಿಷಯ ಎಂದರು. ಹಾಗೇ ಸ್ಥಳದಲ್ಲೇ ವಿದ್ಯಾರ್ಥಿಗಳಿಗೆ ತಲಾ ಒಂದು ಸಾವಿರ ಬಹುಮಾನ ನೀಡಿ ಗೌರವಿಸಿದರು. ಚೆರಿತಾ, ಮಾನಸ, ತೇಜು, ಮನೀಶ್, ಅಂಜನ್, ರೋಹಿತ್, ದೀಪಕ್, ಶಾಲಿನಿ, ಹರ್ಷ ಇವರೇ ಸನ್ಮಾನಕ್ಕೊಳಗಾದ ವಿದ್ಯಾರ್ಥಿಗಳು. ಇವರ ಜೊತೆಯಲ್ಲಿಯೇ ದ್ವಿತೀಯ ಪಿಯುಸಿ ಉತ್ತಮ ಅಂಕಗಳಿಕೆಗಾಗಿ ಶಾಲಿನಿ ಹಾಗೂ ದೀಕ್ಷಿತರವರನ್ನೂ ಸನ್ಮಾನಿಸಿ ಕ್ಯಾಷ್ ಪ್ರೈಸ್ ನೀಡಲಾಯಿತು.

ಓಒಒಖ ಎಂಬುದು 8ನೇ ತರಗತಿಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಯಾಗಿದ್ದು ಆಯ್ಕೆಯಾದ ವರ್ಷಕ್ಕೆ ಹನ್ನೆರಡು ಸಾವಿರ ರೂಪಾಯಿಗಳಂತೆ ಒಟ್ಟಾರೆ 48000 ರೂಪಾಯಿಗಳು ವಿದ್ಯಾರ್ಥಿವೇತನವಾಗಿ ದೊರೆಯುತ್ತದೆ. ಜಿಲ್ಲಾ ಕಾರ್ಯದರ್ಶಿಗಳಾದ ರೇಣುಕೇಶ್ವರ್, ಜಗದೀಶ್ ಮುಗಳಿ, ನವೀನ್ ಕಾರಿಯಪ್ಪ, ಚನ್ನಬಸವಪ್ರಸಾದ್, ಪ್ರಸನ್ನಕುಮಾರ್, ಶ್ರೀನಿವಾಸಮೂರ್ತಿ ಎಂ ಜಿ, ಬಿಳಿಗೆರೆ ಶಿವಕುಮಾರ್, ವಿಜಯಕುಮಾರಿ, ಜನಾರ್ಧನ್, ಶ್ರೀನಿವಾಸಮೂರ್ತಿ, ಟಿ ಆರ್ ಶ್ರೀನಿವಾಸ್, ರಾಜಶೇಖರ್, ಪ್ರಕಾಶ್, ನರಸಿಂಹರಾಜು, ಮಮತಾ ಮತ್ತು ಮಕ್ಕಳ ಪೋಷಕರು, ಪ್ರೇರಣಾ ಸದಸ್ಯರು ಮೊದಲಾದವರು ಹಾಜರಿದ್ದರು.

# ವಾಲ್ಮೀಕಿ ಸಂಘದಿಂದ ಪ್ರತಿಭಾ ಪುರಸ್ಕಾರ : ಅರ್ಜಿ ಆಹ್ವಾನ

ಹುಳಿಯಾರು : ಶ್ರೀ ವಾಲ್ಮೀಕಿ ನಾಯಕ ಟ್ರಸ್ಟ್ ಮತ್ತು ವಾಲ್ಮೀಕಿ ನಾಯಕ ಯುವಪಡೆ ಹಾಗೂ ಶ್ರೀ ವಾಲ್ಮೀಕಿ ಮಹಿಳಾ ನಾಯಕ ಸಂಘ, ಚಿಕ್ಕನಾಯಕನಹಳ್ಳಿ ತಾಲೂಕು ಇವರ ಸಂಯುಕ್ತ ಆಶ್ರಯದಲ್ಲಿ ಜುಲೈ 12 ನೇ ಭಾನುವಾರ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಶೇ. 85 ಮತ್ತು ಅದಕ್ಕಿಂತ ಹೆಚ್ಚು ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.80 ಮತ್ತು ಅದಕ್ಕಿಂತ ಹೆಚ್ಚು ಅಂಕಗಳಿಸಿರುವ ವಿದ್ಯಾರ್ಥಿಗಳನ್ನು ಈ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು. ಅರ್ಹ ವಿದ್ಯಾರ್ಥಿಗಳು ತಮ್ಮ ದಾಖಲಾತಿಗಳನ್ನು ಜುಲೈ 8 ರೊಳಗೆ ಚಿಕ್ಕನಾಯಕನಹಳ್ಳಿ ಡಿಸಿಸಿ ಬ್ಯಾಂಕ್‌ಗೆ ಸಲ್ಲಿಸಬೇಕು. ಬ್ಯಾಂಕ್‌ಗೆ ದಾಖಲೆಗಳನ್ನು ನೀಡಲು ಸಾಧ್ಯವಾಗದವರು ಕೆಳಕಂಡ ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಿ ದಾಖಲಾತಿಗಳನ್ನು ಸಲ್ಲಿಸಬಹುದಾಗಿದೆ ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ : 9886875660 / 8147623969 / 9945443476 / 9632718814 ಸಂಪರ್ಕಿಸಿ.

# ಪ್ರದೀಪ್ ಈಶ್ವರ್ ಶಾಸಕತ್ವ ರದ್ದು ಪಡಿಸಲು ಆಗ್ರಹ

## ಸಮಾನ ಮನಸ್ಕರ ಒಕ್ಕಲಿಗ ವೇದಿಕೆ ಅಧ್ಯಕ್ಷ ಹನುಮಂತೇಗೌಡ ಒತ್ತಾಯ



ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡುವ ಜೊತೆಗೆ ಒಕ್ಕಲಿಗ ಸಮುದಾಯದ ಬಗ್ಗೆ ಮಾತನಾಡುವ ಮೂಲಕ ಜಾತಿ, ಜಾತಿಗಳ ನಡುವೆ ವೈಷಮ್ಯ ಮೂಡಿಸುತ್ತಿರುವ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರ ಶಾಸಕತ್ವವನ್ನು ತಕ್ಷಣ ರದ್ದುಪಡಿಸುವ ಜತೆಗೆ ಕಾಂಗ್ರೆಸ್ ಪಕ್ಷದ ವರಿಷ್ಠರು ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಬೇಕು ಎಂದು ಜಿಲ್ಲಾ ಸಮಾನ ಮನಸ್ಕರ ಒಕ್ಕಲಿಗ ವೇದಿಕೆ ಅಧ್ಯಕ್ಷ ಹನುಮಂತೇಗೌಡ ಆಗ್ರಹಿಸಿದರು.

ಇಲ್ಲಿನ ಜಾನಪದ ಲೋಕದ ಬಳಿ ಇರುವ ಖಾಸಗಿ ಹೋಟೆಲ್‌ನಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯದಲ್ಲಿ ಜನತೆ ಶಾಂತಿ ಮತ್ತು ಸಹಬಾಳ್ವೆಯಿಂದ ಜೀವನ ಸಾಗಿಸುತ್ತಿದ್ದಾರೆ. ಇಂತಹ ಸಮಯದಲ್ಲಿ ಒಂದು ಸಮುದಾಯವನ್ನು ಗುರಿಯಾಗಿಸಿಕೊಂಡು ಮಾತನಾಡುವುದು, ಆ ಸಮುದಾಯದ ಪ್ರಮುಖ ನಾಯಕರ ಬಗ್ಗೆ ಕೀಳಾಗಿ ಮಾತನಾಡುವುದು, ಸಾರ್ವಜನಿಕವಾಗಿ ಕಿರುಚಾಡುವುದು, ಸಾರ್ವಜನಿಕವಾಗಿ ತೊಡೆ, ತೋಳುಗಳನ್ನು ತಟ್ಟಿ ತಲೆಯ ಕೂದಲನ್ನು ಕಿತ್ತುಹಾಕುವ ಮೂಲಕ ಅಸಭ್ಯವಾಗಿ ವರ್ತನೆ ತೋರುವ ಮೂಲಕ ಇವರು ರಾಜ್ಯದ ಜನತೆಗೆ ಯಾವ ಸಂದೇಶವನ್ನು ನೀಡಲು ಮುಂದಾಗಿದ್ದಾರೆ ಎಂದು ಪ್ರದೀಪ್ ಈಶ್ವರ್ ವಿರುದ್ಧ ಹರಿಹಾಯ್ದರು.

**ರಾಜ್ಯಪಾಲರಿಗೆ ದೂರು:** ಒಕ್ಕಲಿಗ ಸಮುದಾಯವನ್ನು ಗುರಿಯಾಗಿಸಿಕೊಂಡು ಹೇಳಿಕೆ ನೀಡುವ ಜೊತೆಗೆ ಒಕ್ಕಲಿಗ ಮುಖಂಡರು ಮತ್ತು ಜನಪ್ರತಿನಿಧಿಗಳ ವಿರುದ್ಧ ಮಾತನಾಡುವ ಮೂವ ಮೂಲಕ ಜಾತಿ ಸಂಘರ್ಷಕ್ಕೆ ಪ್ರೇರೇಪಣೆ ನೀಡುತ್ತಿರುವ ಪ್ರದೀಪ್ ಈಶ್ವರ್ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ರಾಜ್ಯಪಾಲರಿಗೆ ದೂರು ಸಲ್ಲಿಸಲು ಸಮಯಾವಕಾಶ ಕೇಳಲಾಗಿದೆ. ಲೋಕಭವನದಿಂದ ಭೇಟಿಗೆ ಅವಕಾಶ ಸಿಗುತ್ತಿದ್ದಂತೆ ಲಿಖಿತ ದೂರು ನೀಡಿ ಕಾನೂನು ಕ್ರಮಕ್ಕೆ ಕೋರಲಾಗುವುದು. ಅಲ್ಲದೇ ವಿಧಾನಸಭಾಧ್ಯಕ್ಷರಿಗೆ ಮತ್ತು ಕಾಂಗ್ರೆಸ್ ಪಕ್ಷದ ವರಿಷ್ಠರಾದ ರಾಹುಲ್‌ಗಾಂಧಿ ಅವರಿಗೆ ದೂರು ನೀಡಿ ಕ್ರಮಕ್ಕೆ ಆಗ್ರಹಿಸಲಾಗುವುದು ಎಂದು ತಿಳಿಸಿದರು.

ಖಾಸಗಿ ಕಾರ್ಯಕ್ರಮಗಳಲ್ಲಿ ಈ ರೀತಿಯ ತಪ್ಪುಗಳಾದಲ್ಲಿ ಕಾರ್ಯಕ್ರಮದ ಆಯೋಜಕರನ್ನು ಹೊಣೆಯನ್ನಾಗಿಸಲಾಗುತ್ತದೆ. ಆದರೆ, ಈ ಕಾರ್ಯಕ್ರಮದಲ್ಲಿ ನಡೆದಿರುವ ಅವ್ಯವಸ್ಥೆಗಳಿಗೆ ಕಾರ್ಯಕ್ರಮದ ಆಯೋಜಕರನ್ನು ಹೊಣೆಯಾಗಿಸದೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾರ್ವಜನಿಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಇದು ಯಾವ ನ್ಯಾಯ, ಕಾರ್ಯಕ್ರಮದ ಆಯೋಜಕರ ವಿರುದ್ಧವೂ ಪ್ರಕರಣ ದಾಖಲಿಸಬೇಕು ಎಂದು ಅವರು ಒತ್ತಾಯಿಸಿದರು.

**ಉದ್ದೇಶಪೂರ್ವಕ ಕೃತ್ಯ:** ಪ್ರದೀಪ್ ಈಶ್ವರ್ ಅವರು ಚಿಕ್ಕಬಳ್ಳಾಪುರದ ಶಾಸಕರಾಗಿ ಹಲವು ರಾಷ್ಟ್ರೀಯ ಹಬ್ಬಗಳ ಕಾರ್ಯಕ್ರಮದಲ್ಲಿ ಪಾಲ್ಗೊಂಡಿಲ್ಲ. ಆದರೆ, ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಉತ್ಸಾಹ ತೋರಿರುವ ಉದ್ದೇಶವೇ ಅನುಮಾನಸ್ಪದವಾಗಿದ್ದು, ಸಂಘರ್ಷ ಉಂಟುಮಾಡಬೇಕು ಎಂಬ ಉದ್ದೇಶದಿಂದಲೇ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷರು ಮತ್ತು ಹಿರಿಯ ನಾಯಕರು ತಕ್ಷಣ ಅವರ ವಿರುದ್ಧ ಕ್ರಮ ಜರುಗಿಸದೇ ಹೋದಲ್ಲಿ ರಾಜ್ಯದಾದ್ಯಂತ ಹೋರಾಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಬಿಜೆಪಿ ಮಂಜು, ಕುಮಾರಸ್ವಾಮಿ, ವಾಸು, ಸಂತೋಷ್ ಮತ್ತಿತರರು ಇದ್ದರು.

# ಬಯೋಮೆಡಿಕಲ್ ತ್ಯಾಜ್ಯ ಅಪಾಯಕಾರಿ : ಕೆ.ಶೇಷಾದ್ರಿ

## ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದಿಂದ ತ್ಯಾಜ್ಯ ವಿಲೇವಾರಿ ಜಾಗೃತಿ ಕಾರ್ಯಕ್ರಮ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ಪರಿಸರ ಸಂರಕ್ಷಣೆ ಎನ್ನುವುದು ಇಂದಿನ ದಿನಗಳಲ್ಲಿ ಸವಾಲಿನ ವಿಷಯವಾಗಿದ್ದು, ಬಯೋಮೆಡಿಕಲ್ ತ್ಯಾಜ್ಯ ಎನ್ನುವುದು ಸ್ವಾಭಾವಿಕವಾಗಿ ಉತ್ಪತ್ತಿಯಾಗುವ ತ್ಯಾಜ್ಯಕ್ಕಿಂತ ತುಂಬಾ ಅಪಾಯಕಾರಿಯಾದುದು ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ(ಶಶಿ) ಅಭಿಪ್ರಾಯಪಟ್ಟರು.

ಜಿಲ್ಲಾ ಔಷಧ ವ್ಯಾಪಾರಿಗಳ ಸಂಘ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಹಾಗೂ ತಾಲ್ಲೂಕು ಔಷಧಿ ವ್ಯಾಪಾರಿಗಳ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಅವಧಿ ಮೀರಿದ ಔಷಧಗಳನ್ನು ವಿಲೇವಾರಿ ಮಾಡಲು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಯೋಮೆಡಿಕಲ್ ತ್ಯಾಜ್ಯಗಳನ್ನು ಯಾವ ರೀತಿ ಸಂಸ್ಕರಿಸಬೇಕೆಂದು ಗಂಭೀರವಾಗಿ ಚಿಂತಿಸಿ ಕೇಂದ್ರ ಸರ್ಕಾರ ಅನೇಕ ಕಾನೂನುಗಳನ್ನು ಜಾರಿಗೆ ತಂದಿದ್ದು, ಅನೇಕ ಕ್ರಮಗಳನ್ನು ಕೈಗೊಂಡಿದೆ ಎಂದರು.

ಹಿಂದೆ ನಗರದಲ್ಲಿ ಖಾಸಗಿ ಚಿಕಿತ್ಸಾಲಯ, ನರ್ಸಿಂಗ್‌ಹೋಂಗಳಲ್ಲಿ ಉತ್ಪತ್ತಿಯಾದ ಬಯೋಮೆಡಿಕಲ್ ತ್ಯಾಜ್ಯಗಳನ್ನು ರಸ್ತೆಗೆ ತಂದು ಹಾಕುತ್ತಿದ್ದರು. ಪ್ರಸಕ್ತ ಕೆಲವೊಂದು ಸಂಸ್ಥೆಯವರು ಬಯೋಮೆಡಿಕಲ್ ತ್ಯಾಜ್ಯಗಳನ್ನು ಕ್ರಮಬದ್ಧವಾಗಿ ಸಂಗ್ರಹಿಸಿ ಪರಿಸರ ಸಂರಕ್ಷಿಸುವ ಕೆಲಸ ಮಾಡುತ್ತಿದ್ದಾರೆ. ಈ ಉದ್ದೇಶದಿಂದ ಇಂದು ಕಾರ್ಯಾಗಾರ ಮಾಡುತ್ತಿರುವುದು ಔಷಧಿ ವ್ಯಾಪಾರಿಗಳು ಅವಧಿ ಮೀರಿರುವ ಔಷಧಗಳನ್ನು ಯಾವ ರೀತಿ ವಿಲೇ ಮಾಡಬೇಕೆಂಬುದನ್ನು ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಕಾರ್ಯ ಎಂದು ಹೇಳಿದರು.

ಜಾಗೃತಿ ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಭಾಗವಹಿಸಿರುವುದು ವಿಶೇಷ. ಇದರಿಂದ ಇಂದಿನ ಸಮಾಜ ಮತ್ತು ಮುಂದಿನ ಪೀಳಿಗೆಯವರು ಜಾಗೃತರಾಗಿ ಔಷಧ ವ್ಯಾಪಾರಿಗಳ ಸಹಕಾರದೊಂದಿಗೆ ಇಂದು ಕಾರ್ಯಕ್ರಮದಲ್ಲಿ ಸಂಸ್ಥೆಯವರು ವಿತರಿಸಿರುವ ತಿಳುವಳಿಕೆ ಮೂಡಿಸುವ ಪೋಸ್ಟರ್ ಅಂಟಿಸಿದರೆ ಸಾಲದು. ಅದರ ಬಗ್ಗೆ ಗ್ರಾಹಕರಿಗೆ ವ್ಯಾಪಾರಿಗಳು ಅದರ ಉಪಯೋಗವನ್ನು ತಿಳಿಸಬೇಕು. ಗ್ರಾಹಕರು ತಮ್ಮ ಔಷಧಗಳು ಅವಧಿ ಮೀರಿದರೆ ಅದನ್ನು ವಾಪಸ್ಸು ನಮಗೆ ತಂದು ಕೊಡುವಂತೆ ಮನವಿ ಮಾಡಬೇಕು. ಈ ನಿಟ್ಟಿನಲ್ಲಿ ಬಿಡದಿ ಕೆಮಿಸ್ಟ್ ಮತ್ತು ಡ್ರಗ್ಗಿಸ್ಟ್ ಅಸೋಸಿಯೇಷನ್ ಮಂಜುನಾಥ್ ಮತ್ತು ಸ್ನೇಹಿತರ ಕಾರ್ಯ ಶ್ಲಾಘನೀಯ. ನಗರಸಭೆ ವತಿಯಿಂದ ಪೌರಕಾರ್ಮಿಕರಿಗೆ ಮತ್ತು ಆಟೋ ಚಾಲಕರಿಗೆ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡ ವೇಳೆಯಲ್ಲಿ ಉಚಿತವಾಗಿ ಔಷಧಿ ವಿತರಿಸಿ ಸಹಕಾರ ನೀಡಿದ್ದರು ಎಂದು ಸ್ಮರಿಸಿದರು.

ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ್ ಮಾತನಾಡಿ, ಈ ಜಿಲ್ಲೆಯ ಎಲ್ಲಾ ಔಷಧ ವ್ಯಾಪಾರಿಗಳ ಸಹಕಾರದೊಂದಿಗೆ ಹಾಗೂ ಎಡಿಸಿ ನಮ್ರತಾ ಅವರ ನೇತೃತ್ವದಲ್ಲಿ ಇಂದಿನ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಈ ಮೊದಲು ಸ್ವತಂತ್ರವಾಗಿ ಅವಧಿ ಮೀರಿದ ಔಷಧಗಳನ್ನು ಗ್ರಾಹಕರಿಂದ ನಾವು ಪಡೆದುಕೊಳ್ಳುತ್ತಿದ್ದವು. ಪ್ರಸಕ್ತ ಈಗ ಸಂಸ್ಥೆಯೊಂದಿಗೆ ಅಗ್ರಿಮೆಂಟ್ ಮಾಡಿಕೊಳ್ಳಲಾಗಿದ್ದು, ತಿಂಗಳಿನ ಎರಡು ದಿನ ಅವಧಿ ಮೀರಿದ ಔಷಧ ತ್ಯಾಜ್ಯಗಳನ್ನು ಗ್ರಾಹಕರಿಂದ ಪಡೆದುಕೊಳ್ಳಲಾಗುತ್ತಿದೆ. ಬಳಿಕ ಅದನ್ನು ವೈಜ್ಞಾನಿಕವಾಗಿ ನಾಶಪಡಿಸಲಾಗುತ್ತದ್ದು, ಇದರಿಂದಾಗಿ ಪರಿಸರ ಪರಿಣಾಮಕಾರಿಯಾಗಿ ಸಂರಕ್ಷಣೆ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ ಔಷಧ ವ್ಯಾಪಾರಿಗಳ ಕಾರ್ಯ ಮೆಚ್ಚಬೇಕಾದ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಅವಧಿ ಮೀರಿದ ಔಷದಗಳನ್ನು ವಿಲೆ ಮಾಡಲು ಬುಟ್ಟಿಗಳನ್ನು ಔಷಧ ವ್ಯಾಪಾರಿಗಳಿಗೆ ಜಿಲ್ಲಾ ಸಂಘದ ವತಿಯಿಂದ ವಿತರಣೆ ಮಾಡಲಾಯಿತು.

# ನಗರಸಭೆ ಸದಸ್ಯರ ವಿರೋಧದ ನಡುವೆಯೂ ನೀರಿನ ಬಿಲ್ ಹೆಚ್ಚಳ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ಕೆಲ ಸದಸ್ಯರ ವಿರೋಧದ ನಡುವೆಯೂ ನೀರಿನ ದರ ಹೆಚ್ಚಳಕ್ಕೆ ಬುಧವಾರ ನಡೆದ ನಗರಸಭೆ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಲಾಯಿತು.

ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆಯಲ್ಲಿ ವಿಷಯ ಪ್ರಸ್ತಾಪವಾಗುತ್ತಿದ್ದಂತೆ ನಾಮಿನಿ ಸದಸ್ಯ ಬೈರೇಗೌಡ, ನಿಜಾಮುದ್ದೀನ್ ಷರೀಫ್, ಅಕ್ಲಿಂ ಪಾಷಾ ಸೇರಿದಂತೆ ಕೆಲ ಸದಸ್ಯರು ನೀರಿನ ದರ ಹೆಚ್ಚಳಕ್ಕೆ ವಿರೋಧ ವ್ಯಕ್ತಪಡಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಅಧ್ಯಕ್ಷ ಕೆ.ಶೇಷಾದ್ರಿ ಅವರು ಜಲಮಂಡಳಿ ಅಧಿಕಾರಿಗಳು ಕಳೆದ ಆರು ತಿಂಗಳಿಂದಲೂ ನೀರಿನ ದರ ಹೆಚ್ಚಳ ಕೋರಿ ಮನವಿ ಸಲ್ಲಿಸಿದ್ದು, ನಾನೇ ಅದನ್ನು ಮುಂದೂಡುತ್ತಾ ಬಂದಿದ್ದೇನೆ. ಈಗಲೂ ದರ ಹೆಚ್ಚಳ ಮಾಡದಿದ್ದರೆ ಜಲಮಂಡಳಿ ಸಂಕಷ್ಟಕ್ಕೆ ಸಿಲುಕಲಿದೆ. ದೈನಂದಿನ ನಿರ್ವಹಣೆ ಹಾಗೂ ನೌಕರರಿಗೆ ವೇತನ ನೀಡಲು ತೊಂದರೆ ಆಗಲಿದೆ. ಎಂದರು.

ಈ ಹಿನ್ನೆಲೆಯಲ್ಲಿ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸದಸ್ಯರ ಮನವೊಲಿಸಲು ಯತ್ನಿಸಿದರು. ಜಲಮಂಡಳಿ ಅಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವನೆಯಂತೆ ಶೇ.60 ರಷ್ಟು ದರ ಹೆಚ್ಚಳ ಮಾಡಿದರೆ ಸಾರ್ವಜನಿಕರಿಗೆ ಹೊರೆಯಾಗಲಿದೆ. ಹೆಚ್ಚಳ ಮಾಡಲೇಬೇಕೆಂದಾದರೆ ಕನಿಷ್ಠ ದರ ಹೆಚ್ಚಳ ಮಾಡುವಂತೆ ಸಲಹೆ ನೀಡಿದರು. ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ಕೆ.ಶೇಷಾದ್ರಿ ಅವರು ಭರವಸೆ ನೀಡಿ ಚರ್ಚೆಗೆ ತೆರೆ ಎಳೆಯಲಾಯಿತು.

**ಫುಡ್ ಕೋರ್ಟ್ ಹರಾಜು :** ಬೆಂಗಳೂರು–ಮೈಸೂರು ಹೆದ್ದಾರಿಯ ಅರ್ಕಾವತಿ ಸೇತುವೆ ಬಳಿ ನಗರಸಭೆ ವತಿಯಿಂದ ನಿರ್ಮಿಸುತ್ತಿರುವ ಫುಡ್ ಕೋರ್ಟ್ ಮಳಿಗೆಗಳನ್ನು ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಲು ನಗರಸಭೆ ಸಾಮಾನ್ಯ ಸಭೆ ಅನುಮೋದನೆ ನೀಡಲಾಯಿತು. ರೂ.49 ಲಕ್ಷ ವೆಚ್ಚದಲ್ಲಿ ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ ಫುಡ್ ಕೋರ್ಟ್ ಅನ್ನು ರಾಮನಗರ ನಗರಸಭೆ ವತಿಯಿಂದ ನಿರ್ಮಾಣ ಮಾಡಲಾಗುತ್ತಿದೆ. ಶೀಘ್ರದಲ್ಲೆ ಕಾಮಗಾರಿ ಮುಕ್ತಾಯಗೊಳ್ಳಲಿದೆ. ಸರ್ಕಾರಿ ನಿಯಮಾವಳಿಯನ್ವಯ ಮಳಿಗೆಗಳನ್ನು ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಬೇಕು. ಅಲ್ಲಿ ಆಹಾರ ಉತ್ಪನ್ನಗಳ ಮಾರಾಟಕ್ಕೆ ಮಾತ್ರ ಅವಕಾಶ. ಇನ್ನಿತರ ವ್ಯಾಪಾರಗಳಿಗೆ ಅವಕಾಶ ನೀಡುವುದಿಲ್ಲ. ಶೀಘ್ರದಲ್ಲೇ ಪ್ರಕ್ರಿಯೆ ಆರಂಭಿಸಲು ಸಭೆ ಸರ್ವಾನುಮತದ ಅನುಮೋದನೆ ನೀಡಿತು.

**ಕೊಳಗೇರಿ ಪ್ರದೇಶ ಘೋಷಣೆ :** ನಗರ ವ್ಯಾಪ್ತಿಯ ಐಜೂರು ಗುಡ್ಡೆ ನಾಗನಕಟ್ಟೆ ಹಾಗೂ ಇತರೆ ಪ್ರದೇಶಗಳನ್ನು ಕೊಳಗೇರಿ ಪ್ರದೇಶ ಎಂದು ಘೋಷಣೆ ಮಾಡುವುದು, ವಾರ್ಡ್ ನಂಬರ್ 30ರ ವಾಟರ್ ಟ್ಯಾಂಕ್ ಸರ್ಕಲ್‌ಗೆ ಕಿತ್ತೂರು ರಾಣಿ ಚನ್ನಮ್ಮ ವೃತ್ತ ಎಂದು ಹೆಸರಿಡುವುದು, ನಗರಸಭೆಗೆ ಹೊಂದಿಕೊಂಡಿರುವ ರಾಯರದೊಡ್ಡಿ ಶಾಂತಿನಗರ ಬಡಾವಣೆಗೆ ಕಾವೇರಿ ನೀರಿನ ಪೈಪ್‌ಲೈನ್ ವಿಸ್ತರಿಸುವುದು, 21ನೇ ವಾರ್ಡ್‌ನ ಅರ್ಕೇಶ್ವರ ಕಾಲೋನಿಯ ಆಂಜನೇಯ ದೇವಸ್ಥಾನ ಹಾಗೂ ಅಂಗನವಾಡಿ ಕೇಂದ್ರಕ್ಕೆ ಬದಲಿ ಸ್ಥಳ ನೀಡುವುದು.

ಹರೀಸಂದ್ರ ಗ್ರಾಮ ಪಂಚಾಯಿತಿ ಸರ್ವೆ ನಂ.166ರಲ್ಲಿ ರಾಮನಗರದ ನಗರಸಭಾ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕದ ಲ್ಯಾಂಡ್‌ಫಿಲ್ ಘಟಕಕ್ಕೆ ತಡೆಗೋಡೆ ನಿರ್ಮಾಣ ಮಾಡುವ ರೂ.29.50 ಲಕ್ಷ ವೆಚ್ಚದ ಕಾಮಗಾರಿ. ಬೆಂಗಳೂರು–ಮೈಸೂರು ಹೆದ್ದಾರಿ ರಸ್ತೆ ವಿಭಜಕ ಹಾಳಾಗಿದ್ದು, ಜಕಂಗೊಂಡಿರುವ ಕಬ್ಬಿಣದ ಜಾಲರಿಗಳನ್ನು ದುರಸ್ಥಿಗೊಳಿಸುವುದು, ರಾಜ್‌ಕುಮಾರ್ ಕಾಂಪ್ಲೆಕ್ಸ್ ನ 19 ಮಳಿಗೆ, ರಂಗಮಂದಿರ, ಕುಮಂದನ್ ಮೊಹಲ್ಲಾದಲ್ಲಿರುವ 6 ಮಳಿಗೆಗಳ ಬಾಡಿಗೆಯನ್ನು ಶೇ.25ರಷ್ಟು ಕಡಿಮೆ ಮಾಡಿ ಬಹಿರಂಗ ಹರಾಜು ಮಾಡುವ ವಿಷಯಗಳಿಗೆ ಸಾಮಾನ್ಯ ಸಭೆ ಅನುಮೋದನೆ ನೀಡಿದೆ.

ಸಭೆಯಲ್ಲಿ ಜಲಮಂಡಳಿ ಅನುಷ್ಠಾನಕ್ಕೆ ತಂದಿರು ನೀರು ಸರಬರಾಜು ಕಾಮಗಾರಿ ಲೋಪದೋಷ ಕುರಿತು ನಗರಸಭೆ ಸದಸ್ಯರು ಚರ್ಚೆಗೆ ಮುಂದಾದರು, ಕೌನ್ಸಿಲ್ ಬಾಡಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಭೇಟಿಗೆ ಕಾರ್ಯಕ್ರಮ ನಿಗದಿಯಾಗಿದ್ದ ಹಿನ್ನೆಲೆಯಲ್ಲಿ ಇದರ ಬಗ್ಗೆ ಚರ್ಚಿಸಲು ವಿಶೇಷ ಸಾಮಾನ್ಯ ಸಭೆ ಕರೆಯುವುದಾಗಿ ತಿಳಿಸಿದ ನಗರಸಭಾಧ್ಯಕ್ಷರು ಸಭೆಯನ್ನು ಮುಕ್ತಾಯ ಗೊಳಿಸಿದರು.

ಈ ವೇಳೆ ಆಯುಕ್ತರಾದ ಡಾ.ಜಯಣ್ಣ, ಉಪಾಧ್ಯಕ್ಷ ಗಿರಿಜಮ್ಮ ಗುರುವೇಗೌಡ ಸೇರಿದಂತೆ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು

### ಹನಿ ಬಿ ನೆಟ್‌ವರ್ಕ್ ಕ್ರಿಯೇಟಿವಿಟಿ ಅಂಡ್ ಇನ್‌ಕ್ಲೂಯಸಿವ್ ಇನೋವೇಷನ್ ಅವಾರ್ಡ್ ಇಂಡಿಯಾ ಪ್ರಶಸ್ತಿಗೆ ಅರ್ಜಿ ಆಹ್ವಾನ

ರಾಮನಗರ,: ಜಿಲ್ಲೆಯ ಗ್ರಾಮೀಣ ಭಾಗದ ಸೃಜನಶೀಲರು ಹಾಗೂ ಪಾರಂಪರಿಕ ಜ್ಞಾನ ಹೊಂದಿರುವವರು ಹಾಗೂ ಸಮುದಾಯದ ಸಮಸ್ಯೆಗಳನ್ನು ಬಗೆಹರಿಸಿದ ವ್ಯಕ್ತಿಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಹನಿ ಬಿ ನೆಟ್‌ವರ್ಕ್ ಕ್ರಿಯೇಟಿವಿಟಿ ಅಂಡ್ ಇನ್‌ಕ್ಲೂಸಿವ್ ಇನೋವೇಷನ್ ಅವಾರ್ಡ್ ಇಂಡಿಯಾ ಪ್ರಶಸ್ತಿ ನೀಡಿ ಪ್ರತಿಭಾವಂತರನ್ನು ಪುರಸ್ಕರಿಸಲಾಗುತ್ತಿದೆ.

ಗ್ರಾಮೀಣ ಭಾಗದ ತಳ ಸಮುದಾಯಗಳ ಶ್ರೇಯೋಭಿವೃದ್ದಿಗೆ ಪರಿಣಾಮಕಾರಿ ನೂತನ ಅನ್ವೇಷಣೆಗಳು ಹಾಗೂ ಸಾಂಪ್ರದಾಯಿಕ ಜ್ಞಾನದ ಹೊಂದಿರುವ ವ್ಯಕ್ತಿಗಳು, ಸಮುದಾಯದವರು, ರೈತರು, ಕಲಾವಿದರು, ವಿದ್ಯಾರ್ಥಿಗಳು, ಉದ್ಯಮಿಗಳು ಹಾಗೂ ಗ್ರಾಮೀಣ ಮಟ್ಟದ ಸಮಸ್ಯೆಗಳನ್ನು ಬಗೆಹರಿಸುವವರು ಪ್ರೋತ್ಸಾಹಿಸಲು ಹನಿ ಬಿ ನೆಟ್‌ವರ್ಕ್ ಕ್ರಿಯೇಟಿವಿಟಿ ಅಂಡ್ ಇನ್‌ಕ್ಲೂಸಿವ್ ಇನೋವೇಷನ್ ಅವಾರ್ಡ್ ಇಂಡಿಯಾ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಆನ್‌ಲೈನ್ https://gian.org/hbncriia-india 2026 ಅಕ್ಟೋಬರ್ 31ರವರೆಗೆ ಸಲ್ಲಿಸಬಹುದಾಗಿರುತ್ತದೆ.

ಈ ಪ್ರಶಸ್ತಿಯನ್ನು ಹನಿ ಬೀ ನೆಟ್‌ವರ್ಕ್ (ಎಚ್‌ಬಿಎನ್) ಮತ್ತು ಗುಜರಾತ್ ಗ್ರಾಸ್‌ರೂಟ್ಸ್ ಇನೋವೇಷನ್ಸ್ ಆಗ್ಮೆಂಟೇಷನ್ ನೆಟ್‌ವರ್ಕ್ (ಜಿಐಎಎನ್) ರವರ ಸಹಭಾಗಿತ್ವದಲ್ಲಿ ಗುಜರಾತ್ ಎನರ್ಜಿ ಟ್ರಾನ್ಸಿಷನ್ ಕಾರ್ಪರೇಷನ್ (ಜಿಇಟಿಸಿಒ) ಎಚ್‌ಬಿಎನ್ ಸಿಆರ್ ಐಐಎ–ಇಂಡಿಯಾ ಇವರೊಂದಿಗೆ ಜಂಟಿಯಾಗಿ ತಳಮಟ್ಟದ ನೂತನ ನವೀನ್ಯತೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಈ ಪ್ರಶಸ್ತಿ ನೀಡಲಾಗುತ್ತಿದೆ ಎಂದು ಜಿಐಎಎನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿದರಗುಪ್ಪೆಯಲ್ಲಿ ಕೆಂಪೇಗೌಡರ ಜಯಂತಿ: ಉಚಿತ ಆಂಬುಲೆನ್ಸ್ ಸೇವೆಗೆ ಚಾಲನೆ



ಆನೇಕಲ್: ತಾಲ್ಲೂಕಿನ ಬಿದರಗುಪ್ಪೆ ಗ್ರಾಮದಲ್ಲಿ ಕೆಂಪೇಗೌಡರ ಒಕ್ಕಲಿಗರ ಸಂಘದ ವತಿಯಿಂದ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯನ್ನು ಸಂಭ್ರಮ ಮತ್ತು ಸಡಗರದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಒಕ್ಕಲಿಗ ಸಮುದಾಯದ ಮುಖಂಡರು, ಗಣ್ಯರು, ಅತಿಥಿಗಳು ಹಾಗೂ ಗ್ರಾಮಸ್ಥರು ನಾಡಪ್ರಭು ಕೆಂಪೇಗೌಡರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು. ಬಳಿಕ ಸಮಾಜದ ಏಕತೆ ಹಾಗೂ ಕೆಂಪೇಗೌಡರ ಆದರ್ಶಗಳ ಕುರಿತು ಮಾತನಾಡಿ ಅವರ ಕೊಡುಗೆಯನ್ನು ಸ್ಮರಿಸಲಾಯಿತು.

ಜಯಂತಿಯ ವಿಶೇಷ ಅಂಗವಾಗಿ ದೊಡ್ಡಮನೆ ಬಿಡ್ಡಪ್ಪ ಅವರ ಪುತ್ರರಾದ ಬಿ.ಎಸ್. ವಿಜಯ್ ಹಾಗೂ ಭರತ್ ಕುಮಾರ್ ಅವರು ತಮ್ಮ ತಂದೆ–ತಾಯಿ ಶ್ರೀ ರಾಮಯ್ಯ ಹಾಗೂ ಅನುಸೂಯ ದಂಪತಿಯ 43ನೇ ವಿವಾಹ ವಾರ್ಷಿಕೋತ್ಸವದ ನೆನಪಿಗಾಗಿ ಸಾರ್ವಜನಿಕರ ಸೇವಾರ್ಥ ಉಚಿತ ಆಂಬುಲೆನ್ಸ್ ವಾಹನವನ್ನು ಬಿದರಗುಪ್ಪೆ ಗ್ರಾಮ ಪಂಚಾಯಿತಿಗೆ ಕೊಡುಗೆಯಾಗಿ ನೀಡಿದರು.

ಅತ್ತಿಬೆಲೆ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮಂಜುನಾಥ್ ಹಾಗೂ ಇತರ ಗಣ್ಯರು ಆಂಬುಲೆನ್ಸ್ ಸೇವೆಗೆ ಚಾಲನೆ ನೀಡಿ ದಾನಿಗಳ ಸಮಾಜಮುಖಿ ಕಾರ್ಯವನ್ನು ಶ್ಲಾಘಿಸಿದರು. ಗ್ರಾಮೀಣ ಪ್ರದೇಶದ ಜನರಿಗೆ ತುರ್ತು ವೈದ್ಯಕೀಯ ಸೇವೆ ಒದಗಿಸುವ ನಿಟ್ಟಿನಲ್ಲಿ ಈ ಆಂಬುಲೆನ್ಸ್ ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಂಗವಾಗಿ ದಾಸೋಹ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ನೂರಾರು ಗ್ರಾಮಸ್ಥರು ಭಾಗವಹಿಸಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಿದರು.

ಕಾರ್ಯಕ್ರಮದಲ್ಲಿ ಯುವ ಮುಖಂಡರಾದ ವಿಜಯ್, ಕೃಷ್ಣಮೂರ್ತಿ (ಅಪ್ಪಿ), ಆನಂದ್, ನಾಗೇಶ್, ಲಕ್ಷ್ಮಿಪತಿ (ಪಾಪು), ಪ್ರಶಾಂತ್, ನಾರಾಯಣಸ್ವಾಮಿ, ನರೇಂದ್ರ ಬಾಬು, ಗಣೇಶ್, ವಿಷ್ಣುವರ್ಧನ್, ಸಂಘದ ಅಧ್ಯಕ್ಷ ಕೃಷ್ಣಮೂರ್ತಿ, ಬಿ.ಆರ್. ಮೂರ್ತಿ, ಬಿ. ರಾಜೇಶ್, ಚೆನ್ನಪ್ಪ, ಶಂಕರ್ ರೆಡ್ಡಿ, ಬಿ.ಜೆ. ಆಂಜಿನಪ್ಪ, ಶಿವಕುಮಾರ್, ಗುಡ್ಡಹಟ್ಟಿ ನವೀನ್, ಶ್ರೀರಾಮಪ್ಪ, ಅನಿಲ್, ಪ್ರದೀಪ್, ಬಾಬು ಸೇರಿದಂತೆ ಒಕ್ಕಲಿಗ ಸಮುದಾಯದ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪಿಎಸಿಎಂಎಸ್‌ನಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ



ರಾಮನಗರ: ಗ್ರಾಮೀಣ ಸಹಕಾರಿ ಸಂಘಗಳು ನಡೆಸುವ ಆರೋಗ್ಯ ಶಿಬಿರಗಳು ರೈತರಿಗೆ ಹೆಚ್ಚು ಅನುಕೂಲ ಮಾಡಿಕೊಡುತ್ತಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಹಳ್ಳಿಮಾಳ ಪಿಎಸಿಎಂಎಸ್ ಅಧ್ಯಕ್ಷ ಸಿ.ರವಿ ಹೇಳಿದರು.

ತಾಲ್ಲೂಕಿನ ಹಳ್ಳಿಮಾಳ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದಲ್ಲಿ ಗುರುವಾರ ಕೇಂದ್ರ ಸರ್ಕಾರದ ಸಚಿವಾಲಯ 5 ವರ್ಷಗಳನ್ನು ಪೂರೈಸುತ್ತಿರುವ ಹಿನ್ನಲೆಯಲ್ಲಿ "ಸಹಕಾರದಿಂದ ಸಮೃದ್ಧಿ" ಎಂಬ ದ್ಯೇಯದೊಂದಿಗೆ ಆಯೋಜಿಸಿದ್ದ ರೈತರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿ ಅವರು ಮಾತನಾಡಿದರು. ಪ್ರತಿಯೊಬ್ಬರಿಗೂ ಇಂದು ಆರೋಗ್ಯ ಬಹಳ ಮುಖ್ಯವಾಗಿದ್ದು, ಅದರಲ್ಲೂ ಗ್ರಾಮೀಣ ಭಾಗದ ರೈತರಿಗೆ ನೆರವಾಗುವ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸಹಕಾರ ಇಲಾಖೆ ಮತ್ತು ಸಾಯಿ ಆಸ್ಪತ್ರೆ ಸಹಕಾರದಲ್ಲಿ ಆಯೋಜಿಸಿರುವುದು ಶ್ಲಾಘನೀಯ ಎಂದರು.

ಸಂಘದಲ್ಲಿ ಕೆಸಿಸಿ ಅಲ್ಪಾವಧಿ ಸಾಲ ವಿತರಣೆ ಮಾಡುವ ಜೊತೆಗೆ ರೈತರಿಗೆ ಆಧುನಿಕ ಕೃಷಿ ತರಬೇತಿ ಮತ್ತು ಆರೋಗ್ಯ ತಪಾಸಣೆ ಕಾರ್ಯಕ್ರಮ ಆಯೋಜಿಸುವ ಮೂಲಕ ಸಂಘದ ಆಡಳಿತ ಮಂಡಳಿ ಸಮಾಜಮುಖಿ ಕೆಲಸ ಮಾಡುತ್ತಿದೆ. ಸಂಘ ಮತ್ತಷ್ಟು ರೈತರಿಗೆ ನೆರವಾಗುವ ಕೆಲಸಗಳನ್ನು ಹಮ್ಮಿಕೊಂಡು ಮತ್ತಷ್ಟು ಸಮಾಜಮುಖಿಯಾಗಿ ಸಾಗಲಿದೆ. ಇದಕ್ಕೆ ಸಹಕಾರಿಗಳ ಸಹಕಾರ ಅತೀಮುಖ್ಯ ಎಂದ ಅವರು ಆಗಾಗ್ಗೆ ತಪಾಸಣಾ ಶಿಬಿರದ ಪ್ರಯೋಜನ ಪಡೆದುಕೊಂಡು ಆರೋಗ್ಯವಂತರಾಗಿ ಬದುಕು ನಡೆಸಿ ಎಂದು ಸಹಕಾರಿಗಳಿಗೆ ಕಿವಿಮಾತು ಹೇಳಿದರು.

# ಗಡಿಭಾಗದ ನಾಡು, ನುಡಿ, ಭಾಷೆ ನೆಲ, ಜಲ ರಕ್ಷಣೆಗಾಗಿ ಕರವೇ ಕಛೇರಿ ಉದ್ಘಾಟನೆ

ನಾರಾಯಣಗೌಡ ಬಣದ ಕರವೇ ಕಛೇರಿ ಉದ್ಘಾಟನೆ

ಕೊಳ್ಳೇಗಾಲ ಕರ್ನಾಟಕ ರಕ್ಷಣಾ ವೇದಿಕೆ ( ನಾರಾಯಣಗೌಡ)ರ ಬಣದ ತಾಲ್ಲೂಕು ಘಟಕದ ಕಛೇರಿಯನ್ನು ಚಾಮರಾಜನಗರ ಜಿಲ್ಲಾ ಘಟಕದ ಅಧ್ಯಕ್ಷ ಮಂಜೇಶ್ ರವರು ಉದ್ಘಾಟಿಸಿ ಚಾಲನೆ ನೀಡಿದರು

ಪಟ್ಟಣದ ಆರ್ ಎಂ. ಸಿ. ರಸ್ತೆಯಲ್ಲಿರುವ ಕರವೇ ತಾಲ್ಲೂಕು ಘಟಕ ಕಛೇರಿಯನ್ನು ಉದ್ಘಾಟಿಸಿ ಜಿಲ್ಲಾಧ್ಯಕ್ಷ ಮಂಜೇಶ್ ರವರು ಮಾತನಾಡಿ ಈ ದಿನ ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣಗೌಡರ ಬಣದ ಕೊಳ್ಳೇಗಾಲ ತಾಲ್ಲೂಕು ಘಟಕದ ಕಛೇರಿಯನ್ನು ಉದ್ಘಾಟನೆ ಮಾಡಲಾಗಿದೆ ತಾಲ್ಲೂಕು ಘಟಕ ಅಧ್ಯಕ್ಷರಾಗಿ ಮೆಹಬೂಬ್ ಪಾಷ ರವರನ್ನು ಆಯ್ಕೆ ಮಾಡಲಾಗಿದ್ದು ಕರವೇ ಘಟಕವನ್ನು ಸಂಘಟಿಸಿ ನಾಡು, ನುಡಿ, ಭಾಷೆ ನೆಲ, ಜಲ ರಕ್ಷಣೆಗಾಗಿ ಹೋರಾಟ ಮಾಡುವಂತೆ ಅವರಿಗೆ ಸಲಹೆಯನ್ನು ನೀಡಲಾಗಿದೆ,

ಮುಂದಿನ ದಿನಗಳಲ್ಲಿ ಎಲ್ಲರು ಒಗ್ಗಟ್ಟಾಗಿ ಹೋರಾಟ ಮಾಡುತ್ತಾರೆ.ಹಾಗೂ ಕಾವೇರಿ ಮೇಕೆದಾಟು ಯೋಜನೆ ನಮ್ಮ ನಾಡಿನ ಕನಸಾಗಿದ್ದು ತಮಿಳು ನಾಡು ಸರ್ಕಾರ ಮೇಕೆದಾಟು ಯೋಜನೆಗೆ ತಡೆಯೊಡ್ಡುತ್ತಿದೆ ಆದ್ದರಿಂದ ಕೇಂದ್ರ ಸರ್ಕಾರ ತಮಿಳುನಾಡು ಸರ್ಕಾರದ ಅರ್ಜಿಯನ್ನು ತಿರಸ್ಕರಿಸಿ ಮೇಕೆದಾಟು ಯೋಜನೆಗೆ ಆದಷ್ಟು ಬೇಗ ಅನುಮೋದನೆಯನ್ನು ನೀಡಬೇಕೆಂದು ಒತ್ತಾಯಿಸಿ ಕೊಳ್ಳೇಗಾಲ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆಯನ್ನು ನಡೆಸಲಾಗುವುದು ಎಂದರು

ಬಿಡದಿ ಮಹೇಶ್
: ವರದಿಗಾರರರು
99728 34055

# ವಾಹನ ದಟ್ಟಣೆಗಳು ಹೆಚ್ಚಾಗುತ್ತಿರುವ ಹಿನ್ನೆಲೆ; ಪೊಲೀಸ್ ಚೌಕಿ ಉದ್ಘಾಟಿಸಿದ ಎಸ್.ಪಿ

ಸೂರ್ಯಪ್ರಗತಿನ್ಯೂಸ್.ಕಾಂ




ಕೊಳ್ಳೇಗಾಲ ಪಟ್ಟಣದಲ್ಲಿ ಸಂಚಾರಿ ನಿಯಮ ಮಾರ್ಗ ಸೂಚಿಗಾಗಿ ಹಾಗು ಟ್ರಾಫಿಕ್ ನಿಯಂತ್ರಣಕ್ಕಾಗಿ ನಿರ್ಮಿಸಲಾಗಿರುವ ಪೊಲೀಸ್ ಚೌಕಿಗಳನ್ನು ಚಾಮರಾಜನಗರ ಜಿಲ್ಲಾ ಎಸ್ ಪಿ ಮುತ್ತುರಾಜ್ ರವರು ಉದ್ಘಾಟಿಸಿ ಚಾಲನೆ ನೀಡಿದರು,

ನಗರದ ಬಸ್ ನಿಲ್ದಾಣ, ಎಡಿಬಿ ಸರ್ಕಲ್, ಹಾಗೂ ಬಸ್ತಿಪುರ ಸರ್ಕಲ್,ಗಳಲ್ಲಿ ನಿರ್ಮಿಸಲಾಗಿರುವ ಪೊಲೀಸ್ ಚೌಕಿಗಳನ್ನು ಉದ್ಘಾಟಿಸಿ ಚಾಮರಾಜನಗರ ಜಿಲ್ಲಾ ಎಸ್ ಪಿ, ಮುತ್ತುರಾಜ್ ರವರು ಮಾತನಾಡಿ ಕೊಳ್ಳೇಗಾಲ ಪಟ್ಟಣದಲ್ಲಿ ವಾಹನ ದಟ್ಟಣೆ ಹೆಚ್ಚಾಗುತ್ತಿದ್ದೂ ಕೊಳ್ಳೇಗಾಲ ಸುತ್ತಮುತ್ತಲಿನ ಮಹದೇಶ್ವರ ಬೆಟ್ಟ, ಬಿಳಿಗಿರಿ ರಂಗನ ಬೆಟ್ಟ, ಸುತ್ತಮುತ್ತಲಿನ ಧಾರ್ಮಿಕ ಕ್ಷೇತ್ರಗಳಿಗೆ ಬೆಂಗಳೂರು ಸೇರಿದಂತೆ ಹೊರರಾಜ್ಯಗಳಿಂದ ಬೇರೆ ಬೇರೆ ಕಡೆಗಳಿಂದ ಬರುವವರು ಕೊಳ್ಳೇಗಾಲ ಮಾರ್ಗವಾಗೆ ಪ್ರಯಾಣಿಸಬೇಕಾಗಿರುವುದರಿಂದ ಕೊಳ್ಳೇಗಾಲದಲ್ಲಿ ವಾಹನ ದಟ್ಟಣೆಗಳು ಹೆಚ್ಚಾಗುತ್ತಿರುವ ಹಿನ್ನೆಲೆ ತಾತ್ಕಾಲಿಕವಾಗಿ ಬೇರೆ ಬೇರೆ ಕಡೆಯಿಂದ ಆರು ಜನ ಸಿಬ್ಬಂದಿಗಳನ್ನು ತೆಗೆದುಕೊಂಡು ಅವರಿಗೆ ಟ್ರಾಫಿಕ್ ವಿಚಾರವಾಗಿ ತರಬೇತಿಯನ್ನು ಕೊಟ್ಟು ಟ್ರಾಫಿಕ್ ಪೊಲೀಸ್ ಸಮವಸ್ತ್ರಗಳನ್ನು ಕೊಟ್ಟು ತಾತ್ಕಾಲಿಕವಾಗಿ ಪಟ್ಟಣದ ಮೂರು ಕಡೆ ಬಸ್ ನಿಲ್ದಾಣ ಎಡಿಬಿ ಸರ್ಕಲ್, ಹಾಗೂ ಬಸ್ತಿಪುರ ಸರ್ಕಲ್ ಮೂರು ಕಡೆ ಪೊಲೀಸ್ ಚೌಕಿಯನ್ನು ಹಾಕಲಾಗಿದ್ದು ಮೂರು ಚೌಕಿಗಳಲ್ಲಿಯೂ ಕೂಡ ನಮ್ಮ ಸಿಬ್ಬಂದಿಗಳು ಎರಡು ಶಿಫ್ಟ್ ನಲ್ಲಿ ಇವರುಗಳು ಟ್ರಾಫಿಕ್ ನಿಯಂತ್ರಣದ ಕೆಲಸ ಮಾಡುತ್ತಾರೆ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸಿಬ್ಬಂದಿಗಳನ್ನು ತೆಗೆದುಕೊಂಡು ಅವರನ್ನು ಟ್ರಾಫಿಕ್ ನಿಯಂತ್ರಣದ ಕೆಲಸ ನಿಯೋಜಿಸಲಾಗುವುದು ಕೊಳ್ಳೇಗಾಲ ಪಟ್ಟಣದಲ್ಲಿ ಟ್ರಾಫಿಕ್ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರಕ್ಕೆ ಮರು ಪ್ರಸ್ತಾವನೆವನ್ನು ಸಲ್ಲಿಸಲಾಗುತ್ತಿದೆ ಮುಂದಿನ ದಿನಗಳಲ್ಲಿ ಕೊಳ್ಳೇಗಾಲ ಪಟ್ಟಣದಲ್ಲಿ ಟ್ರಾಫಿಕ್ ಪೊಲೀಸ್ ಠಾಣೆ ಕೂಡ ಪ್ರಾರಂಭವಾಗಬಹುದು

ಈಗ ಸದ್ಯಕ್ಕೆ ಮೂರು ಚೌಕಿಗಳಲ್ಲಿ ಎರಡು ಶಿಫ್ಟ್ ಗಳಲ್ಲಿ ಟ್ರಾಫಿಕ್ ನಿಯಂತ್ರಣದ ಕೆಲಸವನ್ನು ಮಾಡುತ್ತಾರೆ

ಮತ್ತು ಪಟ್ಟಣ ಮುಖ್ಯ ರಸ್ತೆಗಳಲ್ಲಿ ಬೈಕ್ ವಿಲಿಂಗ್ ಮಾಡುವವರ ಮೇಲೆ ನಿಗಾವಹಿಸಿ ಬೈಕ್ ಗಳ ಫೋಟೋ ತೆಗೆದು ಬೈಕ್ ಗಳ ನಂಬರ್ ಗಳನ್ನು ಪತ್ತೆ ಹಚ್ಚಿ ಅವರ ಮೇಲೆ ದೂರು ದಾಖಲಿಸಿ ನ್ಯಾಯಾಲಯಕ್ಕೆ ಒಪ್ಪಿಸುವ ಕೆಲಸಗಳನ್ನು ಮಾಡಲಾಗುವುದು ಎಂದರು

# ಆಧುನಿಕ ಶಿಕ್ಷಣ ವ್ಯವಸ್ಥೆಯಿಂದಾಗಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಕಿವಿಯೋಲೆ, ಜನಿವಾರ ತೆಗೆಯುವ ಪರಿಸ್ಥಿತಿ ಬಂದಿರುವುದು ದುರಂತ

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ: ಆಧುನಿಕ ಶಿಕ್ಷಣ ವ್ಯವಸ್ಥೆಯ ಇಂದಿನ ದಿನಗಳಲ್ಲಿ ಪರೀಕ್ಷೆ ಬರೆಯಲು ಕಿವಿಯೋಲೆ, ಜನಿವಾರ ತೆಗೆಯುವ ಪರಿಸ್ಥಿತಿ ಬಂದಿರುವುದು ದುರಂತ ಎಂದು ಪಾವಗಡ ಶ್ರೀ ರಾಮಕೃಷ್ಣ ಸೇವಾಶ್ರಮದ ಸ್ವಾಮಿ ಜಪಾನಂದಜೀ ಮಹರಾಜ್ ತಿಳಿಸಿದರು.

ಪಟ್ಟಣದ ಎಂಜಿಎಂ ಬಾಲಿಕಾ ಪ್ರೌಢಶಾಲೆಯಲ್ಲಿ ಗುರುವಾರ 60 ನೇ ವಜ್ರಮಹೋತ್ಸವ ಸಂಭ್ರಮ ಹಾಗೂ ಮಾನ್ ಹುಮ್ಮೆಲ್ ಕಂಪನಿಯ ಸಹಯೋಗದಿಂದ ನಿರ್ಮಾಣಗೊಂಡಿರುವ ನೂತನ ಶಾಲಾ ಕಟ್ಟಡ ಮತ್ತು ಶಾರದಾದೇವಿ ಮಂದಿರವನ್ನು ಉದ್ಘಾಟಿಸಿ ಮಾತನಾಡಿದ ಅವರು ಪ್ರಸ್ತುತ ದಿನಗಳಲ್ಲಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳ ಕಿವಿಯೋಲೆ, ಜನಿವಾರ ತೆಗೆಸುತ್ತಿರುವ ಹಂತಕ್ಕೆ ಇಂದಿನ ಶಿಕ್ಷಣ ವ್ಯವಸ್ಥೆ ಬಂದು ನಿಂತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಗ್ರಾಮಾಂತರ ಪ್ರದೇಶದ ಮಕ್ಕಳು ಪ್ರತಿಭಾವಂತ ಮಕ್ಕಳಾಗಿದ್ದು, ಅವರಿಗೆ ಪ್ರೋತ್ಸಾಹ ನೀಡಿದರೆ ಶೈಕ್ಷಣಿಕವಾಗಿ ಅಭಿವೃದ್ಧಿ ಸಾಧ್ಯ. ಎಂಜಿಎಂ ಶಾಲೆಯು ಭವಿಷ್ಯ ಭಾರತದ ನಿರ್ಮಾಣಕ್ಕೆ ಅಡಿಪಾಯ ಹಾಕಿದೆ. ಶಾಲೆಯು ಶಿಕ್ಷಣ ಜೊತೆಗೆ ಸಂಸ್ಕಾರ, ಸಂಸ್ಕೃತಿ ಪರಂಪರೆಯನ್ನು ಕಲಿಸುತ್ತಿದೆ. ಮಕ್ಕಳು ಹೃದಯವಂತಿಕೆಯನ್ನು ಬೆಳೆಸಿಕೊಳ್ಳಬೇಕು ಇಂತಹ ಶಾಲೆಗಳಿಂದ ಮಾತ್ರ ದೇಶಾಭಿಮಾನ ಬೆಳೆಸಿಕೊಳ್ಳಬಹುದು. ಈ ಶಾಲೆಗೆ ದೂರ ಶಿಕ್ಷಣಕ್ಕಾಗಿ 5 ಲಕ್ಷ ನೆರವು ನೀಡುವುದಾಗಿ ತಿಳಿಸಿದರು. ಸ್ಥಿತಿವಂತರು ತಮ್ಮ ಗ್ರಾಮಗಳ ಮತ್ತು ಶಾಲೆಗಳ ಅಭಿವೃದ್ಧಿಗೆ ಸಹಕರಿಸಿದರೆ ಭಾರತದ ಅಭಿವೃದ್ಧಿ ಸಾಧ್ಯ ಈ ಶಾಲೆಯನ್ನು ಮಾನ್ ಹುಮ್ಮೆಲ್ ಸಂಸ್ಥೆ ದತ್ತು ತೆಗೆದುಕೊಂಡು ಈ ಶಾಲೆಯನ್ನು ಇನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಬೇಕಾಗಿದೆ. ಈ ಹಿಂದೆ ಎಂಜಿಎಂ ಶಾಲೆಯನ್ನು ಕಾಮಾಕ್ಷಮ್ಮ, ಇಂದುಮತಿ ಪ್ರಸನ್ನಕುಮಾರ್, ಮಾಲಿಮರಿಯಪ್ಪ ಮುಂತಾದವರು ಪ್ರತಿ ಮನೆ ಮನೆಗೆ ತೆರಳಿ ಹೆಣ್ಣು ಮಕ್ಕಳನ್ನು ಶಾಲೆಗೆ ಸೇರಿಸಿಕೊಂಡು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿ ಉತ್ತಮ ಶೈಕ್ಷಣಿಕ ವಾತಾವರಣ ಸೃಷ್ಟಿಸಿದ್ದರು ಎಂದು ಸ್ಮರಿಸಿದರು.

ಡಿಡಿಪಿಐ ಮಾಧವರೆಡ್ಡಿ ಮಾತನಾಡಿ 60 ವರ್ಷಗಳಿಂದ ಎಂಜಿಎಂ ಶಾಲೆಯು ಶಿಕ್ಷಣಕ್ಕೆ ಆದ್ಯತೆ ನೀಡುತ್ತಿದೆ. ವಿದ್ಯಾರ್ಥಿಗಳ ಬೆಳವಣಿಗೆಯಲ್ಲಿ ಶಿಕ್ಷಣವು ಪ್ರಮುಖಪಾತ್ರವಹಿಸುತ್ತದೆ. ಶಾಲೆಯಲ್ಲಿ ವ್ಯಾಸಂಗ ಪೂರ್ಣಗೊಳಿಸಿದ ವಿದ್ಯಾರ್ಥಿಗಳು ತಮ್ಮ ಶಾಲೆಯ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದರು.

ಮಾನ್ ಹುಮ್ಮೆಲ್ ಕಂಪನಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ಅಜಿತ್ ನಾಯರ್, ಪ್ರಶಾಂತ್ ಗಾಯ್ ತೊಂಡೆ, ಡಾ.ಹಾಲಮ್ಮ, ಡಾ.ಮಾಲಿ ಮಿಥುನ್, ಕಾರ್ತಿಕ್ ರಾಜ್, ಡಯಟ್ ಪ್ರಾಂಶುಪಾಲ ಹೆಚ್.ಆರ್. ಗಂಗಾಧರ್,ಬಿಇಒ ಕೆ.ಹೆಚ್. ಹನುಮಂತರಾಯಪ್ಪ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಚಿತ್ತಯ್ಯ, ಪುರಸಭೆಯ ಮಾಜಿ ಉಪಾಧ್ಯಕ್ಷೆ ಸುಜಾತ ಶಂಕರನಾರಾಯಣ, ನಿರ್ದೇಶಕರಾದ ನಟರಾಜು, ಸಂದೀಪ್ ನಾರಾಯಣ್, ಮುಖ್ಯ ಶಿಕ್ಷಕಿ ಚೇತನಕುಮಾರಿ, ಶ್ವೇತಾ ಹಾಗೂ ವಿದ್ಯಾರ್ಥಿನಿಯರು ಇದ್ದರು.

## ಪ.ಪೂ. ಜೂನಿಯರ್ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕ ವಿತರಣೆ




ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು– ನಗರದ ಸರ್ಕಾರಿ ಜೂನಿಯರ್ ಕಾಲೇಜಿನ ವಿದ್ಯಾರ್ಥಿಗಳಿಗೆ ಪ.ಪೂ. ಶಿಕ್ಷಣ ಇಲಾಖೆ ವತಿಯಿಂದ ಸರಬರಾಜು ಮಾಡಿರುವ ಪಠ್ಯಪುಸ್ತಕಗಳನ್ನು ಉಚಿತವಾಗಿ ವಿತರಿಸಲಾಯಿತು.ಕಾಲೇಜಿನ ಆವರಣದಲ್ಲಿ ಸರ್ಕಾರಿ ಪ.ಪೂ. ಕಾಲೇಜಿನ ಪ್ರಾಚಾರ್ಯ ರಾಜಕುಮಾರ್ ಅವರು ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಗಳನ್ನು ವಿತರಿಸಿ, ಸರ್ಕಾರ ಮತ್ತು ಪ.ಪೂ. ಶಿಕ್ಷಣ ಇಲಾಖೆ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಉಚಿತವಾಗಿ ಪಠ್ಯಪುಸ್ತಕಗಳನ್ನು ಸರಬರಾಜು ಮಾಡಿವೆ. ಈ ಪಠ್ಯಪುಸ್ತಕಗಳನ್ನು ವಿದ್ಯಾರ್ಥಿಗಳು ಪಡೆದುಕೊಂಡು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಈಗಾಗಲೇ ತುಮಕೂರು ತಾಲ್ಲೂಕಿನ 10 ಪ.ಪೂ. ಕಾಲೇಜುಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಣೆ ಮಾಡಲಾಗಿದೆ. ಅದೇ ರೀತಿ ನಮ್ಮ ಕಾಲೇಜಿನ ಮಕ್ಕಳಿಗೂ ವಿತರಿಸಲಾಗಿದೆ ಎಂದರು.

ಸರ್ಕಾರ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕ ವಿತರಣೆ ಮಾಡುವ ನಿರ್ಧಾರ ಕೈಗೊಂಡು ಪುಸ್ತಕಗಳನ್ನು ವಿತರಿಸುತ್ತಿರುವುದು ಉತ್ತಮ ಕಾರ್ಯವಾಗಿದೆ. ಇದರಿಂದ ಬಡ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತುಂಬಾ ಅನುಕೂಲವಾಗಲಿದೆ ಎಂದರು.

ವಿದ್ಯಾರ್ಥಿಗಳು ಸರ್ಕಾರ ನೀಡುತ್ತಿರುವ ಉಚಿತ ಪಠ್ಯ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಾಳು ಮಾಡದೆ, ಹರಿದು ಹಾಕದೇ ಸದ್ಬಳಕೆ ಮಾಡಿಕೊಳ್ಳಬೇಕು. ನಿಮ್ಮ ವ್ಯಾಸಂಗ ಮುಗಿದ ಬಳಿಕ ಈ ಪುಸ್ತಕಗಳನ್ನು ಬೇರೆ ವಿದ್ಯಾರ್ಥಿಗಳಿಗೂ ನೀಡಿದರೆ ಅವರಿಗೂ ಅನುಕೂಲವಾಗುತ್ತದೆ ಎಂದು ಹೇಳಿದರು.




ತುಮಕೂರಿನ ಪತ್ರಕರ್ತ ರಾದ ಎಸ್. ಹರೀಶ್ ಆಚಾರ್ಯ ಅವರು ಕೃಷಿ ಸಂವಹನ ಅಧ್ಯಯನ ವಿಷಂಯವಾಗಿ ಮಾಧ್ಯಮ ಅಕಾಡೆಮಿ ಫೆಲೋಷಿಪ್ ಗೌರವಕ್ಕೆ ಭಾಜನರಾಗಿದ್ದು ಬೆಂಗಳೂರಿನ ಗಾಂಧಿ ಭವನದಲ್ಲಿ ಜರುಗಿದ ಪತ್ರಿಕಾ ದಿನಾಚರಣೆಯಲ್ಲಿ ಮಾಜಿ ಸಚಿವ ಹಾಗೂ ಶಾಸಕ ದಿನೇಶ್ ಗುಂಡೂರಾವ್ ಅವರಿಂದ ಪ್ರಮಾಣ ಪತ್ರ ಸ್ವೀಕರಿಸಿದ ರು. ವಾರ್ತಾ ಇಲಾಖೆ ಆಯುಕ್ತ ರಾದ ಅನುಚೇತ್, ಹಿರಿಯ ಪತ್ರಕರ್ತ ರಾದ ಅ ಬ್ದುಸ್ಸಲೇಂ ಪುತ್ತಿಗೆ, ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ಡಾ. ವೂಡೇ ಪಿ ಕೃಷ್ಣ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಅಕಾಡೆಮಿ ಅಧ್ಯಕ್ಷರಾದ ಆಯಿಷಾಖಾನಂ, ಶ್ರೀ ನಿವಾಸರೆಡ್ಡಿ, ಡಾ. ಪೂರ್ಣಿಮಾ, ಅಕಾಡೆಮಿ ಕಾರ್ಯದರ್ಶಿ ಸಹನಾ ಇತರರಿದ್ದರು.

## ಕಂದಾಯ ದಿನಾಚರಣೆ : ಸಾಧಕ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರಶಸ್ತಿ ಪ್ರಧಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿ ಪ್ರಗತಿ ಸಾಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗವನ್ನು ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬುಧವಾರ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕರ್ನಾಟಕ ರಾಜ್ಯ ಕಂದಾಯ ಇಲಾಖಾ ನೌಕರರ ಸಂಘದ ಜಿಲ್ಲಾ ಶಾಖೆ, ಗ್ರಾಮ ಆಡಳಿತಾಧಿಕಾರಿಗಳ ಜಿಲ್ಲಾ ಸಂಘ ಹಾಗೂ ದ್ವಿತೀಯ ದರ್ಜೆ ಸಹಾಯಕರ ನೌಕರರ ಜಿಲ್ಲಾ ಸಂಘದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕಂದಾಯ ಇಲಾಖೆಯು ಜಿಲ್ಲೆಯ ಜನತೆಗೆ ತ್ವರಿತ, ಪಾರದರ್ಶಕ ಹಾಗೂ ಜನಸ್ನೇಹಿ ಸೇವೆಗಳನ್ನು ಒದಗಿಸುವ ಮೂಲಕ ಜಿಲ್ಲೆಯ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರವಹಿಸುತ್ತಿದೆ. ಜಿಲ್ಲೆಯ 1.56 ಲಕ್ಷಕ್ಕೂ ಅಧಿಕ ರೈತರಿಗೆ ಪೌತಿ ಖಾತೆ ಒದಗಿಸುವ ಮೂಲಕ ಮಹತ್ವದ ಸಾಧನೆ ಮಾಡಲಾಗಿದ್ದು, ಈ ಅಭಿಯಾನವು ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವುದು ಜಿಲ್ಲೆಯ ಹೆಮ್ಮೆಯ ವಿಷಯವಾಗಿದೆ ಎಂದರು. ಇದಲ್ಲದೆ, 16 ವರ್ಷಗಳಿಂದ ಬಾಕಿ ಉಳಿದಿದ್ದ 202 ಅಲೆಮಾರಿ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸುವ ಮೂಲಕ ಅವರ



ಬಹುಕಾಲದ ಕನಸನ್ನು ನನಸಾಗಿಸಲಾಗಿದೆ. ಈ ಮೂಲಕ ಹಲವು ಕುಟುಂಬಗಳಿಗೆ ಭೂಮಿಯ ಕಾನೂನುಬದ್ಧ ಹಕ್ಕು ದೊರೆತು, ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸಲಾಗಿದೆ ಎಂದು ತಿಳಿಸಿದರು. ಭೂ ದಾಖಲೆಗಳ ನಿರ್ವಹಣೆ, ಪೌತಿ ಖಾತೆ ಅಭಿಯಾನ, ಹಕ್ಕುಪತ್ರ ವಿತರಣೆ, ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿ ತುರ್ತು ಸ್ಪಂದನೆ, ಸಾರ್ವಜನಿಕರ ಅರ್ಜಿಗಳ ತ್ವರಿತ ವಿಲೇವಾರಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಂದಾಯ ಇಲಾಖೆಯು ಜನಪರ ಸೇವೆ ಸಲ್ಲಿಸುತ್ತಿದ್ದು, ಸಾರ್ವಜನಿಕರ ವಿಶ್ವಾಸ ಗಳಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಜನಸ್ನೇಹಿ ಆಡಳಿತ, ಪಾರದರ್ಶಕತೆ ಹಾಗೂ ಸಮಯಬದ್ಧ ಸೇವೆ ನೀಡುವ ಬದ್ಧತೆಯನ್ನು ಪುನರುಚ್ಚರಿಸಿದರು. ಮುಂದಿನ ದಿನಗಳಲ್ಲಿಯೂ ಸಾರ್ವಜನಿಕರಿಗೆ ಇನ್ನಷ್ಟು ಗುಣಮಟ್ಟದ ಸೇವೆಗಳನ್ನು ಒದಗಿಸಲು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸುವ ಸಂಕಲ್ಪ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ಆಡಳಿತಾಧಿಕಾರಿಗಳು, ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.




ರಂಗ ಪರಂಪರೆ ಟ್ರಸ್ಟ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದಿಂದ ಬೆಂಗಳೂರಿನ ಮಲ್ಲತ್ತಹಳ್ಳಿಯ ಕಲಾಗ್ರಾಮ ಸಮುಚ್ಚಯದಲ್ಲಿ ಪ್ರದರ್ಶಿಸಿತು. ಹಳ್ಳಿಯಲ್ಲೊಂದು ಹರಿಕಥಾ ಪ್ರಸಂಗ ಜಾನಪದ ಶೈಲಿಯ ಹಾಸ್ಯ ನಾಟಕವನ್ನು ಪ್ರದರ್ಶಿಸಿತು.

## ತುಮಕೂರು ನಗರದ 35 ವಾರ್ಡುಗಳಲ್ಲಿ ಎಸ್.ಐ.ಆರ್. ಕುರಿತು ಜಾಗೃತಿ

ತುಮಕೂರು– ರಾಜ್ಯದಲ್ಲಿ ಚುನಾವಣಾ ಆಯೋಗದಿಂದ ವಿಶೇಷ ಮತದಾರರ ಪಟ್ಟಿ ಪರಿಕ್ಷರಣೆ(ಎಸ್.ಐ.ಆರ್.) ನಡೆಯುತ್ತಿದ್ದು, ತುಮಕೂರು ನಗರದ 35 ವಾರ್ಡುಗಳ ಜನರು ತಮ್ಮ ಮನೆಯ ಬಳಿ ಬರುವ ಬಿ.ಎಲ್.ಓಗಳು ನೀಡುವ ನೊಂದಣಿ ಫಾರಂಗೆ ಸೂಕ್ತ ಮಾಹಿತಿ ತುಂಬುವ ಮೂಲಕ ತಮ್ಮ ಮತದಾನದ ಹಕ್ಕನ್ನು ಪಡೆಯುವಂತೆ ಮಾಜಿ ಶಾಸಕ ಡಾ.ಎಸ್.ಷಪಿ ಅಹಮದ್ ಕರೆ ನೀಡಿದ್ದಾರೆ.

ನಗರದ ಮಕ್ಕಾ ಮಸೀದಿಯಲ್ಲಿ ಹಮ್ಮಿಕೊಂಡಿದ್ದ ಎಸ್.ಐ.ಆರ್ ಮಾಹಿತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಎಸ್.ಐ.ಆರ್.ನಿಂದ ಯಾರು ಸಹ ಮತದಾನದ ಹಕ್ಕು ಕಳೆದುಕೊಳ್ಳಬಾರದೆಂಬ ಉದ್ದೇಶದಿಂದ ಪ್ರತಿಯೊಬ್ಬರು ತಮ್ಮ ಹೆಸರನ್ನು ನೊಂದಾಯಿಸು ವಂತೆ ನೋಡಿಕೊಳ್ಳಬೇಕಾಗಿದೆ ಎಂದರು.ನಗರದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಮ್ಯಾಪಿಂಗ್ ಕಾರ್ಯ ಒಂದು ಹಂತದಲ್ಲಿ ಪೂರ್ಣಗೊಂಡಿದ್ದು, ಜೂನ್ 30 ರಿಂದ ಜುಲೈ 29 ರವರೆಗೆ ಚುನಾವಣಾ ಆಯೋಗದಿಂದ ನೇಮಕಗೊಂಡಿರುವ



ಬಿಎಲ್‌ಓಗಳು ಪ್ರತಿ ಮನೆಗೆ ಭೇಟಿ ನೀಡಿ ಮತದಾರರ ಪಟ್ಟಿ ನೊಂದಣಿ ಫಾರಂ(ಎನಬರೇಷನ್)ನೀಡಲಿದ್ದು, ಮತದಾರರು ಪ್ರಜ್ಞಾಪೂರ್ವಕವಾಗಿ ಫಾರಂ ಓದಿ, ಅರ್ಥ ಮಾಡಿಕೊಂಡು,ತಪ್ಪಿಲ್ಲದಂತೆ ಭರ್ತಿ ನೀಡಿ ನೀಡಬೇಕಿದೆ.ಸಾರ್ವಜನಿಕರು ಬಿಎಲ್‌ಓಗಳೊಂದಿಗೆ ಸಹಕರಿಸಿ,ನಮ್ಮ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ಉಳಿಸಿಕೊಳ್ಳೋಣ ಎಂದು ಡಾ.ಎಸ್.ಷಪಿಅಹಮದ್ ತಿಳಿಸಿದರು.

ವಿಧಾನಪರಿಷತ್ ಸದಸ್ಯ ಹಾಗೂ ಎಸ್.ಐ.ಆರ್ ತುಮಕೂರು ಜಿಲ್ಲಾ ಉಸ್ತುವಾರಿ ರಮೇಶಬಾಬು ಮಾತನಾಡಿ, ಕಾಂಗ್ರೆಸ್ ಪಕ್ಷದಿಂದ ನಗರದ ಬಾರ್‌ಲೈನ್ ರಸ್ತೆಯಲ್ಲಿರುವ ಮಕ್ಕಾ ಮಸೀದಿಯಲ್ಲಿ ಎಸ್.ಐ.ಆರ್. ಕಾರ್ಯಾಗಾರ ಹಮ್ಮಿಕೊಂಡಿದೆ.ನಮ್ಮ ಪಕ್ಷದ ಬಿಲ್.ಎಲ್.ಎ 2 ಗಳು ಪ್ರತಿ ಮತದಾರರ ಮನೆಗೆ ಭೇಟಿ ನೀಡಿ, ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ.ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಮಾಜಿ ಶಾಸಕರಾದ ಡಾ.ಎಸ್.ಷಪಿಅಹಮದ್ ಅವರ ನೇತೃತ್ವದಲ್ಲಿ ಇಂದು ಕಾರ್ಯಾಗಾರ ನಡೆಸಿ, ಮಾಹಿತಿ ನೀಡುವ ಕೆಲಸ ಮಾಡಲಾಗುತ್ತಿದೆ ಎಂದರು.

ಎಪಿಸಿಆರ್‌ನ ಅಡ್ವಕೇಟ್ ತಾಹೀರ್ ಹುಸೇನ್ ಅವರು ಪಿಪಿಟಿ ಮೂಲಕ ಎಸ್.ಐ.ಆರ್.ನ ಮತದಾರರ ನೊಂದಣಿ ಫಾರಂ ತುಂಬುವುದು ಹೇಗೆ,ಇದರ ಮಹತ್ವವೇನು ಎಂಬುದನ್ನು ಮನವರಿಕೆ ಮಾಡಿಕೊಟ್ಟರು.

ಈ ವೇಳೆ ಮುಖಂಡರುಗಳು ಹಲವರು ಪಾಲ್ಗೊಂಡಿದ್ದರು.

## ಆಮ್ಲಜನಕದಿಂದ ಬದುಕಿದ್ದು, ವಾತಾವರಣದಲ್ಲಿ ಆಮ್ಲಜನಕದ ಕೊರತೆ ಹೆಚ್ಚಾದರೆ ಮನುಷ್ಯರ ಜೀವ ಹೋಗುತ್ತದೆ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ಪರಿಸರ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ. ಮರ–ಗಿಡಗಳನ್ನು ಬೆಳೆಸುವ ಮೂಲಕ ವಾತಾವರಣಕ್ಕೆ ಹಸಿರಿನ ಹೊದಿಕೆ ಹೊದಿಸಬೇಕು ಎಂದು ಮಾಜಿ ಸಚಿವ, ಶಾಸಕ ಕೆ.ಎನ್. ರಾಜಣ್ಣ ಕರೆ ನೀಡಿದರು.

ಪಟ್ಟಣದ ನೇರಳೇಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ಅರಣ್ಯ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವನ ಮಹೋತ್ಸವ ಕಾರ್ಯಕ್ರಮವನ್ನು ಶಾಲೆಯ ಆವರಣದಲ್ಲಿ ಗಿಡ ನೆಡುವ ಮೂಲಕ ಉದ್ಘಾಟಿಸಿದ ಅವರು ಕಾಡು ಇಲ್ಲದಿದ್ದರೆ ನಾವು ಇಲ್ಲ. ಆಮ್ಲಜನಕದಿಂದ ನಾವು ಬದುಕಿದ್ದು, ವಾತಾವರಣದಲ್ಲಿ ಆಮ್ಲಜನಕದ ಕೊರತೆ ಹೆಚ್ಚಾದರೆ ಮನುಷ್ಯರ ಜೀವ ಹೋಗುತ್ತದೆ. ಮರಗಿಡಗಳನ್ನು ಬೆಳೆಸಲು ಸರ್ಕಾರವೂ ಪ್ರೋತ್ಸಾಹ ನೀಡುತ್ತಿದ್ದು, ಜನರ ಸಹಕಾರ ಇಲ್ಲದಿದ್ದರೆ ಮರ–ಗಿಡಗಳನ್ನು ಬೆಳೆಸಲು ಸಾಧ್ಯವಿಲ್ಲ. ಹೊಸ ಪೀಳಿಗೆಗೆ ಉತ್ತಮ ವಾತಾವರಣ ನೀಡುವ ಜವಾಬ್ದಾರಿ ನಮ್ಮೆಲ್ಲರದ್ದು ಎಂದರು.

ನೇರಳೇಕೆರೆ ಗ್ರಾಮದ ಯುವ ಜನತೆ, ಹಿರಿಯರು ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಉತ್ಸುಕರಾಗಿದ್ದಾರೆ. ಇವರು ಇತರರಿಗೆ ಮಾದರಿಯಾಗಿದ್ದಾರೆ. ಹಳೆಯ ವಿದ್ಯಾರ್ಥಿಗಳು ವಿದ್ಯೆಯಿಂದ ಜೀವನ ರೂಪಿಸಿಕೊಂಡವರು ಶಾಲೆಯ ಅಭಿವೃದ್ಧಿ ಶ್ರಮಿಸುತ್ತಿರುವುದು ಮಾದರಿಯಾಗಿದೆ. ಗ್ರಾಮದ ಸರ್ಕಾರಿ ಶಾಲೆಯಲ್ಲಿ ಮಕ್ಕಳೂ ಸಹ ಉತ್ತಮವಾಗಿ ವಿದ್ಯಾಭ್ಯಾಸ ಮಾಡುತ್ತಿದ್ದು, ಶಿಕ್ಷಕರೂ ಸಹ ಸ್ವಂತ ಮಕ್ಕಳಂತೆ ಶಾಲೆಯ ಮಕ್ಕಳನ್ನು ನೋಡಿಕೊಳ್ಳುತ್ತಿರುವುದು ಉತ್ತಮ ಬೆಳವಣಿಗೆ.

ಮುಂದಿನ ಶೈಕ್ಷಣಿಕ ವರ್ಷದಿಂದ ನೇರಳೇಕೆರೆ ಗ್ರಾಮದಲ್ಲಿ ಎಲ್.ಕೆ.ಜಿ, ಯುಕೆಜಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ತಂದೆ–ತಾಯಿ ಮಕ್ಕಳಿಗೆ ಜೀವ ನೀಡಿದರೆ ಜೀವನ ನೀಡುವವರು ಶಿಕ್ಷಕರು ಮತ್ತು ಸಮಾಜ. ಹಳ್ಳಿಗಾಡಿನ ಮಕ್ಕಳು ದಡ್ಡರು ಎಂಬ ಭಾವನೆ ಸರಿಯಲ್ಲ. ಎಲ್ಲ ಮಕ್ಕಳಿಗೂ ದೇವರು ಒಂದೇ ಸಮನಾದ ಬುದ್ಧಿಶಕ್ತಿಯನ್ನು




ನೀಡಿರುತ್ತಾನೆ, ಅದನ್ನು ಹೊರಹೊಮ್ಮಿಸುವ ವಾತಾವರಣ ನಿರ್ಮಿಸಿದರೆ ಎಲ್ಲ ಮಕ್ಕಳು ಉನ್ನತ ಹುದ್ದೆಗಳನ್ನು ಅಲಂಕರಿಸಲಿದ್ದಾರೆ. ಇಂದು ಶಿಕ್ಷಣಕ್ಕೆ ಎಲ್ಲ ಸವಲತ್ತುಗಳು ದೊರೆಯುತ್ತಿದ್ದು, ಮಕ್ಕಳು ಈ ಸವಲತ್ತುಗಳನ್ನು ಬಳಸಿಕೊಂಡು ಯಶಸ್ಸು ಗಳಿಸಿ ಎಂದರು.

13–18 ರ ಅವಧಿಯಲ್ಲಿ 16400 ಮನೆಗಳನ್ನು ನಿರ್ಮಿಸಲಾಗಿತ್ತು. ಈಗಲೂ ಸಹ ಮನೆಗಳ ನಿರ್ಮಾಣಕ್ಕೆ ಒತ್ತು ನೀಡಲಾಗುತ್ತಿದ್ದು, ಆದರೆ ಮನೆಗಳನ್ನು ನಿರ್ಮಿಸಲು ಜನತೆ ಮುಂದೆ ಬರುತ್ತಿಲ್ಲ. ಮನೆ ನಿರ್ಮಾಣದ ಖರ್ಚು ಹೆಚ್ಚಳವಾಗಿರುವುದೂ ಇದಕ್ಕೆ ಕಾರಣವಾಗಿದ್ದು, ಸರ್ಕಾರದ ವತಿಯಿಂದ ಸಹಾಯಧನವನ್ನು 3 ಲಕ್ಷ ರೂಗಳಿಗೆ ಹೆಚ್ಚಿಸಲು ಚಿಂತನೆ ನಡೆಸಲಾಗಿದೆ. ಬರಗಾಲಕ್ಕೆ ಯಾರೂ ಹೆದರಬೇಡಿ. ಸಿದ್ದರಾಮಯ್ಯನವರ ಅನ್ನಭಾಗ್ಯ ಯೋಜನೆ ನಿರಂತರವಾಗಿ ಇರುತ್ತದೆ. ಯಾರೂ ಸಹ ಹಸಿವಿನಿಂದ ಬಳಲುವ ವಾತಾವರಣ ಇಲ್ಲ. ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ಕ್ರಮವಹಿಸಲಾಗಿದೆ. ಮೇವಿನ ಕೊರತೆಯಾದರೆ ಹೊರಭಾಗದಿಂದ ಮೇವು ತರಿಸಿ ಹಂಚಲಾಗುವುದು. ಅಗತ್ಯ ಬಿದ್ದರೆ ಗೋಶಾಲೆಗಳನ್ನು ತೆರೆಯಲಾಗುವುದು ಎಂದು ಭರವಸೆ ನೀಡಿದರು.

ಬಾಕ್ಸ್ : ನಿಮ್ಮ ತಾಯಿಯವರ ಹೆಸರಿನಲ್ಲಿ ಗಿಡಗಳನ್ನು ಬೆಳೆಸಿ ಎಂದು ಪ್ರಧಾನಿ ಮೋದಿಯವರು ಹೇಳಿದ್ದು, ಇದು ಸಮಾಜಮುಖಿ ಚಿಂತನೆ, ವಿದ್ಯಾರ್ಥಿಗಳು ಶಾಲೆಯ ಆವರಣಗಳಲ್ಲಿ ನಿಮ್ಮ ಹೆಸರಿನಲ್ಲಿ ಗಿಡ ನೆಟ್ಟು ಪೋಷಿಸಿ ಬೆಳಸಿ ಎಂದು ಶಾಸಕ ಕೆ.ಎನ್. ರಾಜಣ್ಣ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ವಲಯ ಅರಣ್ಯಾಧಿಕಾರಿ ಸುರೇಶ್ ಮಾತನಾಡಿ ನೇರಳೇಕೆರೆ ಶಾಲೆಯಲ್ಲಿ ವನ ಮಹೋತ್ಸವ ಕಾರ್ಯಕ್ರಮ ಆಯೋಜನೆ ಮಾಡಲಾಗಿದ್ದು, ತಾಲೂಕಿನಲ್ಲಿ ರೈತರ ಹೊಲ, ಸರ್ಕಾರಿ ಸ್ಥಳ, ಶಾಲೆಯ ಆವರಣ, ರಸ್ತೆ ಬದಿಗಳಲ್ಲಿ ಹಸಿರುಹೊದಿಕೆಯನ್ನು ಹೊದಿಸುವ ಮೂಲಕ ಪರಿಸರ ರಕ್ಷಣೆ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ಕಳೆದ ವರ್ಷ 65 ಸಾವಿರ ಗಿಡಗಳನ್ನು ನೆಡಲಾಗಿದ್ದು, ಶೇ. 90 ಕ್ಕೂ ಹೆಚ್ಚು ಗಿಡಗಳು ಬೆಳೆದು ನಿಂತಿವೆ. ಈ ವರ್ಷ 1.70 ಲಕ್ಷ ಗಿಡ ನೆಡಲಾಗಿದ್ದು, ಶಾಲೆ, ಸರ್ಕಾರ ಕಚೇರಿ ಮತ್ತು ರೈತರ ಹೊಲಗಳಲ್ಲಿ ಗಿಡ ನೆಡುವುದಾಗಿ ಕೇಳಿದರೆ ಗಿಡ ನೀಡುತ್ತೇವೆ.

ತಿಮ್ಮಲಾಪುರ ಅರಣ್ಯ ಪ್ರದೇಶವನ್ನು 2016 ರಲ್ಲಿ ಅಭಯಾರಣ್ಯ ಮಾಡಲು ಶಾಸಕ ರಾಜಣ್ಣನವರ ಶ್ರಮ ಹೆಚ್ಚಾಗಿದ್ದು, ಇದರಿಂದ ಸುತ್ತಮುತ್ತಲ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಾಗಿದೆ. ಗಿಡ ಹಾಕುವುದು ಮುಖ್ಯವಲ್ಲ. ಗಿಡಗಳು ಬದುಕಿ ಉಳಿಯುವ ರೀತಿ ಕ್ರಮ ವಹಿಸಬೇಕು ಎಂದು ಶಾಸಕರು ಸೂಚನೆ ನೀಡಿದ್ದು, ಇದು ಪರಿಸರ ರಕ್ಷಣೆಯ ಬಗ್ಗೆ ಶಾಸಕರಿಗೆ ಇರುವ ಕಾಳಜಿ ತೋರಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ಜಿಲ್ಲಾ ವಲಯ ಅರಣ್ಯಾಧಿಕಾರಿ ಶಶಿಧರ್, ಉಪ ವಲಯ ಅರಣ್ಯಾಧಿಕಾರಿ ಮಲ್ಲಿಕಾರ್ಜುನಯ್ಯ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಶೈಲಜಾ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಜಿ.ಜೆ. ರಾಜಣ್ಣ, ಕೆಪಿಸಿಸಿ ಸದಸ್ಯ ಎಂ.ಎಸ್. ಮಲ್ಲಿಕಾರ್ಜುನಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋಪಾಲಯ್ಯ, ಡಿಡಿಪಿಐ ಮಾಧವರೆಡ್ಡಿ, ಬಿಇಓ ಹನುಮಂತರಾಯಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರಂಗಪ್ಪ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಕೆಂಚಪ್ಪ, ಕೆಎಂಎಫ್ ಮಾಜಿ ನಿರ್ದೇಶಕ ಕಾಂತರಾಜು, ಸಾಹಿತಿ ನೇ.ಬ. ರಾಮಲಿಂಗ ಶೆಟ್ಟಿ, ಶಾಲೆಯ ಮುಖ್ಯ ಶಿಕ್ಷಕ ಮಲ್ಲಿಕಾರ್ಜುನಯ್ಯ, ಕೃಷಿ ಸಮಾಜದ ಅಧ್ಯಕ್ಷ ಗುಟ್ಟೆ ರಮೇಶ್, ನಿವೃತ್ತ ಅಧಿಕಾರಿ ಪಾಷಾ, ಕುರುಬರಹಳ್ಳಿ ಹರ್ಷ, ದಾನಿಗಳಾದ ಶಾಂತರಾಮಸ್ವಾಮಿ ಹಾಗೂ ರಾಮಾಚಾರ್, ಗ್ರಾಮಸ್ಥರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಇದ್ದರು.

### ಕೋತಿ ದಾಳಿ:ವೃದ್ದೆ ಗಾಯ

ಮಧುಗಿರಿ:–:ಪುರವರ ಹೋಬಳಿ ಹಂದ್ರಾಳು ಗ್ರಾಮದ ವಾಸಿ ಲೇಟ್ ನಂಜುಂಡಪ್ಪನವರ ಪತ್ನಿ ಜಯಲಕ್ಷ್ಮಮ್ಮ (70) ಎಂಬುವವರ ಮೇಲೆ ಬ್ಯಾಲ್ಯ ಗ್ರಾಮದ ಬ್ಯಾಂಕ್ ಬಳಿ ಕೋತಿ ದಾಳಿ ಮಾಡಿ ತಲೆ, ಕೆನ್ನೆಯನ್ನು ಪರಚಿ ಗಾಯಗೊಳಿಸಿದೆ.ತಲೆಗೆ ತೀವ್ರ ಗಾಯವಾಗಿ ರಕ್ತ ಸುರಿಯುತ್ತಿದ್ದ ವೃದ್ದ ಮಹಿಳೆಯನ್ನು ಪರಿಚಿತರು ಬ್ಯಾಲ್ಯ ಪ್ರಾ.ಆ.ಕೇಂದ್ರಕ್ಕೆ ದಾಖಲಿಸಿದ್ದಾರೆ. ಅಲ್ಲಿನ ವೈದ್ಯಾಧಿಕಾರಿ ಡಾ.ಕಾವ್ಯಶ್ರೀ ಎಂ.ಎಸ್.ರವರು ಪ್ರಥಮ ಚಿಕಿತ್ಸೆ ನೀಡಿ, 108 ಆಂಬ್ಯುಲೆನ್ಸ್ ಕರೆಸಿ ಹೆಚ್ಚಿನ ಚಿಕಿತ್ಸೆ ಗಾಗಿ ಮಧುಗಿರಿ ಆಸ್ಪತ್ರೆಗೆ ಕಳಿಸಿಕೊಟ್ಟಿದ್ದಾರೆ. ಬ್ಯಾಲ್ಯ ಗ್ರಾಮದಲ್ಲಿ ವಿಪರೀತ ಕೋತಿಗಳಿದ್ದು ಮಕ್ಕಳು, ಮಹಿಳೆಯರು, ವೃದ್ಧರ ಮೇಲೆ ಆಗಾಗ ದಾಳಿ ಮಾಡುತ್ತಲೆ ಇರುತ್ತವೆ. ದ್ವಿಚಕ್ರ ವಾಹನಗಳಿಗೆ ಅಡ್ಡ ಬಂದು ಅಪಘಾತಗಳು ಸಹ ಆಗಿರುತ್ತವೆ. ಸಂಬಂಧಪಟ್ಟ ಇಲಾಖೆಯವರು ಕೋತಿಗಳನ್ನು ಆದಷ್ಟು ಬೇಗ ಹಿಡಿದು ಹೊರಗಡೆ ಸಾಗಿಸಿ, ಕೋತಿ ಕಾಟ ತಪ್ಪಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ತಿಪಟೂರು –2028ರ ಚುನಾವಣೆಯಲ್ಲಿ ಸ್ಪರ್ಧೆ ಖಚಿತ: ಮಾಜಿ ಜಿ.ಪಂ. ಸದಸ್ಯ ಜಿ. ನಾರಾಯಣ್ ಘೋಷಣೆ

ಸೂರ್ಯಪ್ರಗತಿನ್ಯೂಸ್.ಕಾಂ

"ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಥವಾ ಬಿಜೆಪಿ ರಾಷ್ಟ್ರೀಯ ಪಕ್ಷಗಳಿಂದ ಟಿಕೆಟ್ ಸಿಕ್ಕರೆ ಪಕ್ಷದ ಪರವಾಗಿ, ಇಲ್ಲವಾದರೆ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುವುದು ನೂರಕ್ಕೆ ನೂರರಷ್ಟು ಖಚಿತ" ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಜಿ. ನಾರಾಯಣ್ ಅವರು ಸ್ಪಷ್ಟಪಡಿಸಿದ್ದಾರೆ.



ನಗರದ ಹುಳಿಯಾರು ರಸ್ತೆಯ ಟಿ.ಎಂ. ಮಂಜುನಾಥ ನಗರದಲ್ಲಿರುವ ತಮ್ಮ ಗೃಹ ಕಚೇರಿಯಲ್ಲಿ ಹಮ್ಮಿಕೊಂಡಿದ್ದ 'ಪತ್ರಿಕಾ ದಿನಾಚರಣೆ' ಕಾರ್ಯಕ್ರಮದಲ್ಲಿ ಪತ್ರಕರ್ತರನ್ನು ಸನ್ಮಾನಿಸಿ, ಸಿಹಿ ಹಂಚಿ ಅವರು ಮಾತನಾಡಿದರು.

"ಕಳೆದ 18–19 ವರ್ಷಗಳಿಂದ ತಾಲೂಕಿನ ಜನತೆಯೊಂದಿಗೆ ನಿರಂತರ ಒಡನಾಟ ಹೊಂದಿದ್ದೇನೆ. ಈ ಬಾರಿ ಅಭಿಮಾನಿಗಳ ಆಸೆಯಂತೆ ಜುಲೈ 27ರಂದು ನನ್ನ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ," ಎಂದು ಜಿ. ನಾರಾಯಣ್ ತಿಳಿಸಿದರು.

ಜನ್ಮದಿನದ ಅಂಗವಾಗಿ ತಾಲೂಕಿನಾದ್ಯಂತ ಸಾಮಾಜಿಕಕಾರ್ಯಕ್ರಮಗಳನ್ನುಹಮ್ಮಿಕೊಳ್ಳಲಾಗಿದೆ:

ತಾಲೂಕಿನ ಎಲ್ಲಾ 288 ಸರ್ಕಾರಿ ಶಾಲೆಗಳ ಒಟ್ಟು 13,000 ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಣೆ ಮಾಡಲಾಗುವುದು

ಕ್ಷೇತ್ರದ 10,000 ಹೆಣ್ಣು ಮಕ್ಕಳಿಗೆ ಜನ್ಮದಿನದ ಅಂಗವಾಗಿ ಬಾಗಿನ ಸಮರ್ಪಣೆ.

ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ 95% ಕ್ಕಿಂತ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವಧನ ನೀಡಿಕೆ.

ತಾಲೂಕಿನ ಪತ್ರಕರ್ತರು, ವಕೀಲರು ಹಾಗೂ ಅಂಗವಿಕಲರಿಗೆ ವಿಶೇಷ ಸನ್ಮಾನ ಸಮಾರಂಭ.

ತಾಲೂಕಿನ ಹಿರಿಯರು, ಕಿರಿಯರು, ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ, ಆಶೀರ್ವದಿಸಬೇಕೆಂದು ಅವರು ಇದೇ ವೇಳೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ತಾಲೂಕು ಪಂಚಾಯತ್ ಅಧ್ಯಕ್ಷ ವಿರೂಪಾಕ್ಷ, ತಾಲೂಕು ರೈತ ಸಂಘದ ಅಧ್ಯಕ್ಷ ಬಸ್ತಿಹಳ್ಳಿ ರಾಜಣ್ಣ, ಮುಖಂಡರಾದ ಮಂಜುನಾಥ್, ಚಿದಾನಂದ, ಓಂಕಾರ, ಸುಗಂಧರಾಜು, ಗಂಗಾಧರ್ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಜೀವನದ ಸಾಧನೆಗಳನ್ನು ದಾಖಲಿಸುವ ಸಂಸ್ಕೃತಿ ಬೆಳೆಸಿಕೊಳ್ಳಿ: ಜೆ.ಸಿ. ಮಾಧುಸ್ವಾಮಿ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು: ಜೀವನದಲ್ಲಿ ಮಾಡಿದ ಸಾಧನೆಗಳು, ಅನುಭವಗಳು ಹಾಗೂ ಉತ್ತಮ ಕಾರ್ಯಗಳನ್ನು ದಾಖಲಿಸುವ ಸಂಸ್ಕೃತಿಯನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು ಎಂದು ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ತಿಳಿಸಿದರು.

ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದ ಆಡಿಟೋರಿಯಂನಲ್ಲಿ ಸೋಮವಾರ ನಡೆದ 'ಕಲ್ಪತರು ಕಥನ' ಕೃತಿ ಲೋಕಾರ್ಪಣೆ ಹಾಗೂ ಹಿರಿಯ ವಿದ್ಯಾರ್ಥಿ ಸಂಘದ ಪುನಶ್ಚೇತನ ಸಮಾರಂಭದಲ್ಲಿ ಮಾತನಾಡಿದರು.

ಕಲ್ಪತರು ವಿದ್ಯಾ ಸಂಸ್ಥೆ ಭಾರತ ಭೂಪಟದಲ್ಲಿ ತಿಪಟೂರನ್ನು ಗುರುತಿಸುವ ಮಟ್ಟಿಗೆ ಬೆಳೆದಿದ್ದು, ಅದರ ಬೆಳವಣಿಗೆಯಲ್ಲಿ ಮಹಾಲಿಂಗಯ್ಯನವರು ಇತಿಹಾಸ ನಿರ್ಮಿಸಿದ್ದಾರೆ. ಅವರ ಸಾಧನೆಗಳು ದಾಖಲೆಗಳ ಮೂಲಕ ಇಂದಿಗೂ ಉಳಿದಿವೆ. ಇದೇ ರೀತಿ ಪ್ರತಿಯೊಬ್ಬರೂ ತಮ್ಮ ಜೀವನದ ಅನುಭವ ಮತ್ತು ಸಾಧನೆಗಳನ್ನು ದಾಖಲಿಸುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಹೇಳಿದರು. ಭಾರತೀಯರಲ್ಲಿ ಆತ್ಮಕಥನ ಮತ್ತು ಜೀವನದ ಅನುಭವಗಳನ್ನು ದಾಖಲಿಸುವ ಸಂಸ್ಕೃತಿ ಕಡಿಮೆ ಇದೆ. ಮಹಾತ್ಮ ಗಾಂಧೀಜಿ ತಮ್ಮ ಆತ್ಮಚರಿತ್ರೆಯಲ್ಲಿ ಜೀವನದ ಒಳ್ಳೆಯದು ಮತ್ತು ಕೆಟ್ಟದು ಎರಡನ್ನೂ ಪ್ರಾಮಾಣಿಕವಾಗಿ ದಾಖಲಿಸಿದ್ದರಿಂದ ವಿಶ್ವಪ್ರಸಿದ್ಧಿಯಾಗಿದೆ. ಪ್ರತಿಯೊಬ್ಬರೂ ತಮ್ಮ ಜೀವನ ಪಯಣವನ್ನು ದಾಖಲಿಸುವ ಕಾರ್ಯಕ್ಕೆ ಮುಂದಾಗಬೇಕು. ಮನುಷ್ಯನು ಮೊದಲು ತನ್ನ ದೌರ್ಬಲ್ಯಗಳನ್ನು ಗುರುತಿಸಿ ದಾಖಲಿಸಬೇಕು. ಬಳಿಕ ಅವುಗಳನ್ನು ಮೀರಿ ಬೆಳೆಯಲು ಪ್ರಯತ್ನಿಸಬೇಕು. ದೌರ್ಬಲ್ಯಗಳನ್ನು



ಮೀರಿ ವ್ಯಕ್ತಿತ್ವ ರೂಪಿಸಿಕೊಳ್ಳುವುದೇ ನಿಜವಾದ ಶಿಕ್ಷಣ ಎಂದರು.

ಸಂಸ್ಥೆಗಳು ಮತ್ತು ವ್ಯಕ್ತಿಗಳು ಕಾಲಕ್ಕೆ ತಕ್ಕಂತೆ ನಿರಂತರವಾಗಿ ನವೀಕರಣಗೊಂಡು ಪ್ರಗತಿಯತ್ತ ಸಾಗಿದಾಗ ಮಾತ್ರ ಜೀವಂತಿಕೆ ಹಾಗೂ ಚೈತನ್ಯ ಉಳಿಯುತ್ತದೆ, ನಮ್ಮಿಂದ ಸಾಧ್ಯವಾದಷ್ಟು ಒಳ್ಳೆಯ ಕೆಲಸಗಳನ್ನು ಮಾಡಬೇಕು. ಒಳ್ಳೆಯ ಕೆಲಸ ಮಾಡುವವರನ್ನು ಪ್ರೋತ್ಸಾಹಿಸಬೇಕು. ಪ್ರತಿಯೊಂದು ವಿಷಯಕ್ಕೂ ಟೀಕೆ ಮಾಡುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳದೆ, ಸಮಸ್ಯೆ ಕಂಡಾಗ ಚರ್ಚೆಯ ಮೂಲಕ ಪರಿಹಾರ ಕಂಡುಕೊಳ್ಳಬೇಕು. ಆಗ ಮಾತ್ರ ವಿದ್ಯಾವಂತರಿಗೂ ವಿದ್ಯೆಗೂ ನಿಜವಾದ ಗೌರವ ಸಿಗುತ್ತದೆ ಎಂದು ಹೇಳಿದರು.

ಜೀವನವು ಕಬಡ್ಡಿ ಆಟವಾಗಬಾರದು. ಇತರರನ್ನು ಕೆಳಕ್ಕೆ ಎಳೆಯುವ ಬದಲು, ಒಬ್ಬರನ್ನೊಬ್ಬರು ಬೆಳೆಸುವ ಮನೋಭಾವ ಬೆಳೆಸಿಕೊಂಡಾಗ ಸಮಾಜ, ಶಿಕ್ಷಣ ಮತ್ತು ದೇಶ ಅಭಿವೃದ್ಧಿಯತ್ತ ಸಾಗುತ್ತದೆ ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಜಿ.ಸಿದ್ದರಾಮಯ್ಯ ಮಾತನಾಡಿ ಸ್ಥಳೀಯ ಭಾಷೆಗೆ ಶಿಕ್ಷಣದಲ್ಲಿ ಬೆಲೆಯಿಲ್ಲದಂತಾದರೆ ಆಡಳಿತದಲ್ಲಿ ಕನ್ನಡ ಭಾಷೆ ಕಳೆದು ಹೋಗುತ್ತದೆ, ಶಿಕ್ಷಣ ವ್ಯವಸ್ಥೆ ಅದೋಗತಿ ಹೋಗುತ್ತಿರುವ ಸಂದರ್ಭದಲ್ಲಿ ಕಲ್ಪತರು ವಿದ್ಯಾಸಂಸ್ಥೆ ಮಾನವೀಯ ಮೌಲ್ಯಗಳನ್ನಿಟ್ಟುಕೊಂಡು ಶಿಕ್ಷಣ ನೀಡುತ್ತಿರುವುದು ಪ್ರಾಮುಖ್ಯತೆಯನ್ನು ಉಳಿಕೊಂಡಿದೆ ಎಂದರು.

ಸಂಸ್ಥೆಯ ವಿಶ್ರಾಂತ ಪ್ರಾಚಾರ್ಯ ಸುಜಯಾ ಮಹಾಲಿಂಗಯ್ಯ ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು. ನಂತರ ಸಣ್ಣಹೊನ್ನಯ್ಯ ಕಂಟಲಗೆರೆ ಮತ್ತು ಸಂಗಡಿಗರಿಂದ ಕರಪಾಲ ಸಾಂಸ್ಕೃತಿಕ ಕಾರ್ಯಕ್ರಮ ನೇರವೇರಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಪಿ.ಕೆ.ತಿಪ್ಪೇರುದ್ರಪ್ಪ ವಹಿಸಿದ್ದರು. ಮಾಜಿ ಕುಲಪತಿ ಪ್ರೊ.ಈ.ಟಿ.ಪುಟ್ಟಯ್ಯ, 'ಕಲ್ಪತರು ಕಥನ' ಕೃತಿಯ ಲೇಖಕ ಡಾ.ಸಿದ್ದಗಂಗಯ್ಯ ಹೊಲತಾಳು, ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ.ವೂಡೇ.ಪಿ.ಕೃಷ್ಣ, ಖಜಾಂಚಿ, ಟಿ.ಎಸ್.ಶಿವಪ್ರಸಾದ್ ಸೇರಿದಂತೆ ಹಲವರು ಮಾತನಾಡಿದರು.

ಸಂಸ್ಥೆಯ ಉಪಾಧ್ಯಕ್ಷ ಟಿ.ಎಸ್.ಬಸವರಾಜು, ಬಾಗೇಪಲ್ಲಿ ನಟರಾಜು, ಸಂಗಮೇಶ್ ಎಂ.ಆರ್, ಕಾರ್ಯದರ್ಶಿಗಳಾದ ಜಿ.ಪಿ.ದೀಪಕ್, ಉಮಾಶಂಕರ್,ಜಿ.ಎಸ್. ಪಿ.ಜಗದೀಶ್‌ಮೂರ್ತಿ, ಕ್ಷೇತ್ರಶಿಕ್ಷಣಾಧಿಕಾರಿ ತಾರಾಮಣಿ, ಪ್ರೊ.ಶಿವರಾಜು, ಹಿರಿಯ ವಿದ್ಯಾರ್ಥಿ ಸಂಘದ ನಿಯೋಜಿತ ಅಧ್ಯಕ್ಷ ಜ್ಯೋತಿಗಣೇಶ್.ವಿ.ಎಸ್. ಸಂಸ್ಥೆಯ ಪ್ರಾಂಶುಪಾಲರು, ಹಿರಿಯ ವಿದ್ಯಾರ್ಥಿಗಳು ಸೇರಿದಂತೆ ಉಪಸ್ಥಿತರಿದ್ದರು.

ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದ ಆಡಿಟೋರಿಯಂನಲ್ಲಿ 'ಕಲ್ಪತರು ಕಥನ' ಕೃತಿ ಲೋಕಾರ್ಪಣೆ ಹಾಗೂ ಹಿರಿಯ ವಿದ್ಯಾರ್ಥಿ ಸಂಘದ ಪುನಶ್ಚೇತನ ಸಮಾರಂಭದ ಉದ್ಘಾಟನೆ ನಗರದ ಕಲ್ಪತರು ವಿದ್ಯಾಸಂಸ್ಥೆಯಿಂದ ಆಯೋಜಿಸಲಾಗಿದ್ದ 'ಕಲ್ಪತರು ಕಥನ' ಕೃತಿಯನ್ನು ಜನಾರ್ಪಣೆ ಮಾಡಲಾಯಿತು.

### ಸಂಘಗಳ ನೋಂದಣಿ/ಮಾನ್ಯತೆ ನವೀಕರಣಕ್ಕೆ ಅವಕಾಶ

ತುಮಕೂರು; ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು 1960 ಸಹಕಾರ ನಿಬಂಧನೆಗಳ ಕಾಯ್ದೆ ಪ್ರಕಾರ ಜಿಲ್ಲೆಯಲ್ಲಿ 2026–27ನೇ ಸಾಲಿಗೆ ಯುವಕ/ಯುವತಿ ಸಂಘಗಳನ್ನು ನೋಂದಣಿ/ ಮಾನ್ಯತೆ ನವೀಕರಣ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ. ಅರ್ಹ ಯುವಕ/ಯುವತಿ ಸಂಘಗಳು ಈ ಅವಕಾಶದ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ, ತುಮಕೂರು ಅಥವಾ ಮೊ.ಸಂ. 9901316107, 9741291379ನ್ನು ಸಂಪರ್ಕಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com